ಸಂಪುಟ : 10 ಸಂಚಿಕೆ: 79 ಪುಟ : 4+2 ಬೆಲೆ: 3.00 ಶನಿವಾರ ಏಪ್ರಿಲ್ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 79 Pages : 4+2 Price : 3.00 Saturday April 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಎ.26ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 2 – ಸೆಟ್ಲಮೆಂಟ್, ಗಾಂಧಿನಗರ, ಹರಣಶಿಕಾರಿ ಓಣಿ, ಸಬ್ ಜೈಲ ರಸ್ತೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 – ದೊಡ್ಡ ಮಸೂತಿ ಭಾಗ, 2,000 ಮನೆ, 2,800 ಮನೆ ಮಸೂತಿಯ ಸುತ್ತಮುತ್ತಲಿನ ಭಾಗಗಳು. ವಾರ್ಡ್ ನಂ. 35 – ಆದರ್ಶ ನಗರ, ದೇವರಾಜ್ ಹಾಸ್ಟೆಲ್, ನೀಲಮ್ಮ ತಾಯಿ ಮಠ ಉಳಿದ ಕೆಲವು ಭಾಗಗಳು. ವಾರ್ಡ್ ನಂ 29 – ಉರ್ದು ಶಾಲೆ, ಚಂದಾವರಿ ಸರ್ ಲೈನ್, ಹುಲಿಗೆಮ್ಮ ದೇವಿ ಗುಡಿ, ಕಲ್ಯಾಣ ಮಂಟಪ ಭಾಗ, ಕೆ ವಿ ಎಸ್ ಆರ್ ಹಾಸ್ಟೆಲ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ.28 – ಪಂಚಾಕ್ಷರಿ ನಗರ 4, 5ನೇ ಕ್ರಾಸ್‌ಗಳು. ವಾರ್ಡ್ ನಂ. 26 – ಅಕ್ಕನ ಬಳಗ, ಕಲಾಮಂದಿರ, ಜೆ ಟಿ ಮಠ ರೋಡ್, ಮಾಳೆಕೊಪ್ಪ ಮಠದ ಸಂಧಿ, ದನದ ದವಾಖಾನೆ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎ.29ರಂದು ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ನೇರ ಸಂದರ್ಶನವಿದ್ದು ದಿನಾಂಕ 29-04-2025, ಮಂಗಳವಾರ ಬೆಳಿಗ್ಗೆ 09-30 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ರೂ.ನಂ:215 ಜಿಲ್ಲಾ ಆಡಳಿತ ಭವನ ಗದಗ, ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಸದರಿ ನೇರ ಸಂದರ್ಶನದಲ್ಲಿ ಹಲವಾರು ಕಂಪನಿಗಳು ಭಾಗವಹಿಸಲಿವೆ.

ಹೆಚ್ಚಿನ ಮಾಹಿತಿಗಾಗಿ ಈ ಕಚೇರಿ ದೂರವಾಣಿ ಸಂಖ್ಯೆ, 6363330688, 08372-220609 ಕ್ಕೆ ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ, ಪಿ,ಯು.ಸಿ 10+2 ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿ. ಹುದ್ದೆ ಪಿಕ್ಕಿಂಗ್& ಪ್ಯಾಕಿಂಗ್, ಎ.ಎಮ್.ಸಿ ಆಪರೇಷನ್, ಅಸೆಂಬ್ಲಿ, ಕ್ವಾಲಿಟಿ ಇನ್ಸ್ಪೆಕ್ಷನ್, ಆಪರೇಟರ್. ವಯಸ್ಸು 25 ರಿಂದ 30, ಕೆಲಸದ ಸ್ಥಳ ಬೆಂಗಳೂರು.

ನೇರ ಸಂದರ್ಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮ್(ಬಯೋಡೇಟಾ) ಪ್ರತಿಗಳು, ಮತ್ತು ಆಧಾರ್ ಕಾರ್ಡ್ ಝೆರಾಕ್ಸ್‌ನೊಂದಿಗೆ ಭಾಗವಹಿಸಬಹುದು. ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂದರ್ಶನದ ದಿನದಂದೇ ಮಾಡಿಸಬೇಕಾಗಿದೆ.

### ಪಹಲ್ಗಾಮ್ ಉಗ್ರರ ದಾಳಿಯನ್ನು ಖಂಡಿಸಿ ನಡೆದ ಪ್ರತಿಭಟನೆಯಲ್ಲಿ ಅಂಜುಮನ್ ಇಸ್ಲಾಂ ಕಮಿಟಿ ಪ್ರಮುಖರ ಆರೋಪ

# ಕೇಂದ್ರದ ನಿರ್ಲಕ್ಷ್ಯವೇ ದಾಳಿಗೆ ಕಾರಣ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದಿರುವ ಉಗ್ರರ ದಾಳಿ ಪೂರ್ವಯೋಜಿತ ಸಂಚು. ಪ್ರಾಣಹತ್ಯೆ ಮಾಡಿರುವ ಈ ಘಟನೆ ಅತ್ಯಂತ ಖಂಡನೀಯವಾಗಿದ್ದು, ಕೇಂದ್ರ ಸರ್ಕಾರದ ನಿರ್ಲಕ್ಷ್ಯವೇ ಈ ಘಟನೆಗೆ ಕಾರವಾಗಿದೆ ಎಂದು ಅಂಜುಮನ್ ಇಸ್ಲಾಂ ಕಮಿಟಿಯ ಮಾಜಿ ಚೇರಮನ್ ಎ.ಡಿ. ಕೋಲಕಾರ ಆರೋಪಿಸಿದರು.

ನಗರದ ಕೆ.ಕೆ. ಸರ್ಕಲ್‌ನಲ್ಲಿ ಅಂಜುಮನ್ ಇಸ್ಲಾಂ ಕಮಿಟಿ ವತಿಯಿಂದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ಕೃತ್ಯವನ್ನು ಖಂಡಿಸಿ ನಡೆದ ಪ್ರತಿಭಟನೆಯಲ್ಲಿ ಅವರು ಮಾತನಾಡುತ್ತಿದ್ದರು.

ಈ ಘಟನೆಯಲ್ಲಿ ಸುಮಾರು 28 ಜನ ಪ್ರವಾಸಿಗರು ಮೃತಪಟ್ಟಿದ್ದಾರೆ. ಉಗ್ರರ ದಾಳಿ ನಡೆಯುವ ಮಾಹಿತಿ ಮೊದಲೇ ತಿಳಿಯದಿರುವುದು ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ. ದೇಶದ ಕೋಮು ಸೌಹಾರ್ದತೆ ಮತ್ತು ಶಾಂತಿಯನ್ನು ಕದಡುವ ಪ್ರಯತ್ನವಾಗಿದೆ.



ಇದು ಮಾನವನ ಮೇಲೆ ನಡೆದ ದಾಳಿ ಮಾತ್ರವಲ್ಲ, ಭಾರತದ ಬಹುತ್ವ, ಶಾಂತಿ ಸಹಬಾಳ್ವೆಯ ಮೌಲ್ಯಗಳ ಮೇಲೆ ನಡೆಸಿದ ದಾಳಿಯಾಗಿದೆ ಎಂದರು.

ಧರ್ಮದ ಹೆಸರಿನಲ್ಲಿ ಇಂತಹ ದಾಳಿಗಳನ್ನು ಮಾಡುವ ಭಯೋತ್ಪಾದಕರ ವಿರುದ್ಧ ಕೇಂದ್ರ ಸರ್ಕಾರ ಕಠಿಣಕ್ರಮ ಕೈಗೊಳ್ಳಬೇಕು. ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಕುಟುಂಬದವರೊಂದಿಗೆ ನಾವೆಲ್ಲರೂ ಒಗ್ಗಟ್ಟಿನಿಂದ ನಿಲ್ಲುತ್ತೇವೆ. ನಾವು ಜವಾಬ್ದಾರಿಯುತ ಭಾರತೀಯ ನಾಗರಿಕರಾಗಿ ಮತ್ತು ಶಾಂತಿ, ನ್ಯಾಯ ಹಾಗೂ ಮಾನವ ಜೀವನದ ಪಾವಿತ್ರ್ಯತೆಯನ್ನು ಎತ್ತಿ ಹಿಡಿಯುಲು ಮುಂದಾಗಬೇಕಿದೆ ಎಂದರಲ್ಲದೆ, ಈ ಕರಾಳ ಶಕ್ತಿಗಳನ್ನು ಸುಮ್ಮನೆ ಬಿಡಬಾರದು. ಭಯೋತ್ಪಾದಕರನ್ನು ಪತ್ತೆ ಮಾಡಿ ಗಲ್ಲುಶಿಕ್ಷೆ ವಿಧಿಸಲು ಮುಂದಾಗಬೇಕಿದೆ ಎಂದರು.

ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಮಾತನಾಡಿ, ಈ ದಾಳಿಯಲ್ಲಿ ಪ್ರಾಣ ಕಳೆದುಕೊಂಡು ಆಂತಕದಲ್ಲಿರುವ ಕುಟುಂಬಗಳಿಗೆ ಸೂಕ್ತ ಭದ್ರತೆ ಒದಗಿಸುವುದರೊಂದಿಗೆ ಸರ್ಕಾರ ಪರಿಹಾರ ನೀಡಬೇಕು. ಸಾಮಾಜಿಕ ಜಾಲತಾಣ, ದೃಶ್ಯ ಮಾಧ್ಯಮಗಳಲ್ಲಿ ಈ ದಾಳಿಯನ್ನು ಗುರಿಯಾಗಿಸಿಕೊಂಡು ಮುಸ್ಲಿಂ ಸಮಾಜದ ಬಗ್ಗೆ ಸುಳ್ಳುಗಳನ್ನು ಹಬ್ಬಿಸಿ ಸಮುದಾಯದ ತೇಜೋವಧೆ ಮಾಡಿ, ದೇಶದ ಕೋಮು ಸೌಹಾರ್ದತೆ ಹಾಳು ಮಾಡುತ್ತಿರುವ ಪಟ್ಟಭದ್ರ ಕೋಮುವಾದಿ ಶಕ್ತಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

> ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಮಾತನಾಡಿ, ಈ ದಾಳಿಯು ಕೇಂದ್ರ ಸರ್ಕಾರದ ನಿರ್ಲಕ್ಷ್ಯದ ಪರಿಣಾಮವಾಗಿದ್ದು, ಪ್ರಧಾನಮಂತ್ರಿಗಳು, ಗೃಹ ಸಚಿವರು ನೈತಿಕ ಹೊಣೆಹೊತ್ತು ಕೂಡಲೇ ರಾಜೀನಾಮೆ ನೀಡಬೇಕು. ಈ ದುರಂತದಿಂದಾಗಿ ಕೀಳುಮಟ್ಟದ ದ್ವೇಷದ ಬೀಜ ಚಿಗುರಲು ಅವಕಾಶ ನೀಡಬಾರದು. ಪರಸ್ಪರ ಗೌರವ ಹಾಗೂ ಕೋಮು ಸಾಮರಸ್ಯವನ್ನು ಕಾಪಾಡಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲು ಮುಂದಾಗಬೇಕಿದೆ ಎಂದರು.

ಪುರಸಭೆ ಸದಸ್ಯ ರಾಜು ಸಾಂಗ್ಲಿಕರ ಮಾತನಾಡಿ, ಬಹುತ್ವ ಭಾರತವನ್ನು ಒಡೆದು ಧರ್ಮ-ಧರ್ಮಗಳ ನಡುವೆ ವಿಷ ಬೀಜ ಬಿತ್ತುವುದರೊಂದಿಗೆ ಈ ದೇಶವನ್ನು ವಿಭಜಿಸುವುದೇ ಅವರ ಗುರಿಯಾಗಿದ್ದು, ಕೂಡಲೇ ಕೇಂದ್ರ ಸರ್ಕಾರ ಭಯೋತ್ಪಾದನೆ ನಿಗ್ರಹಕ್ಕೆ ಕ್ರಮ ತೆಗೆದುಕೊಳ್ಳಬೇಕು ಎಂದರು.

ಜಾಮಿಯಾ ಮಸೀದಿಯಿಂದ ಪ್ರಾರಂಭಗೊಂಡ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಕಾಲ್ನಡಿಗೆ ಮೂಲಕ ಸಾಗಿ ಕೆ.ಕೆ. ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನಾ ಮನವಿಯನ್ನು ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಅಂಜುಮನ್ ಇಸ್ಲಾಂ ಕಮಿಟಿ ಚೇರಮನ್ ಹಸನಸಾಬ ತಟಗಾರ, ಕಾರ್ಯದರ್ಶಿ ಫಯಾಜ್ ತೋಟದ, ಎಂ.ಬಿ. ಕಂದಗಲ್ಲ, ದಾದು ಹಣಗಿ, ಮುಸ್ತಾಕ ಹಕ್ಕಿ, ಸುಭಾನಸಾಬ ಆರಗಿದ್ದಿ, ಭಾಷಾ ಮುದಗಲ್ಲ, ಖಾಸಿಂಸಾಬ ಮುಚ್ಚಾಲಿ, ಅರಳಿಕಟ್ಟಿ, ಮಾಸುಮಲಿ ಮದಗಾರ, ಇಮ್ರಾನ ಅತ್ತಾರ ಸೇರಿದಂತೆ ಇತರರು ಇದ್ದರು.

### ಕುರ್ತಕೋಟಿ ಗ್ರಾಮದಲ್ಲಿ ಕಂದಕ ಬದು ಕಾಮಗಾರಿ ವೀಕ್ಷಿಸಿದ ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ

# ದುಡಿಮೆಗೆ ಉದ್ಯೋಗ ಖಾತ್ರಿ ಬಲ

■ ವಿಜಯಸಾಕ್ಷಿ ಸುದ್ದಿ, ಗದಗ

ಕೂಲಿ ಕಾರ್ಮಿಕರ ವಲಸೆ ತಡೆಗಟ್ಟುವುದು, ಗ್ರಾಮೀಣ ಭಾಗದ ಸಂಪನ್ಮೂಲ ಸಂರಕ್ಷಣೆ, ಮಣ್ಣು ಮತ್ತು ನೀರು ಸಂರಕ್ಷಣೆ, ಜಲ ಮೂಲಗಳ ಸಂರಕ್ಷಣೆ ಜತೆಗೆ ದುಡಿಮೆಗೆ ಉದ್ಯೋಗ ಖಾತ್ರಿ ಯೋಜನೆ ಸಾಕಷ್ಟು ನೆರವಾಗುತ್ತಿದೆ ಎಂದು ಜಿ.ಪಂ ಸಹಾಯ ನಿರ್ದೇಶಕರಾದ ಸಿ.ಆರ್. ಮುಂಡರಗಿ ಅಭಿಪ್ರಾಯಪಟ್ಟರು.

ಶುಕ್ರವಾರ ಗದಗ ತಾಲೂಕಿನ ಕುರ್ತಕೋಟಿ ಗ್ರಾಮದಲ್ಲಿ ಪ್ರಗತಿಯಲ್ಲಿರುವ ಸಮುದಾಯ ಬದು ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿಕಾರರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಆರಂಭವಾಗಿರುವ ಕಂದಕ ಬದು ನಿರ್ಮಾಣದಲ್ಲಿ ಪ್ರತಿದಿನ 70 ಸಾವಿರಕ್ಕೂ ಹೆಚ್ಚು ಜನ ಭಾಗಿಯಾಗುತ್ತಿದ್ದಾರೆ. ಗ್ರಾಮೀಣ ಭಾಗದ ಮೂಲಸೌಕರ್ಯಗಳ ಅಭಿವೃದ್ಧಿ ಮತ್ತು ನಿರ್ಮಾಣವು ಉದ್ಯೋಗ ಖಾತ್ರಿ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಕೂಲಿ ಪಾವತಿಯಲ್ಲಿ ಗಂಡು-ಹೆಣ್ಣು ಎಂಬ ವ್ಯತ್ಯಾಸವಿಲ್ಲದೆ, ಪ್ರತಿ ದಿನಕ್ಕೆ 370 ರೂ. ಕೂಲಿ ನಿಗದಿಪಡಿಸಿದೆ. ನರೇಗಾ ಕೆಲಸದ ಸ್ಥಳದಲ್ಲಿ ನೀರು ಮತ್ತು ನೆರಳಿನ ವ್ಯವಸ್ಥೆ, ಆರೋಗ್ಯ ತಪಾಸಣೆ, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಇಡಲಾಗಿದೆ. ಚಿಕ್ಕ ಮಕ್ಕಳನ್ನು ನೋಡಿಕೊಳ್ಳಲು ಕೂಸಿನ ಮನೆ ತೆರೆಯಲಾಗಿದೆ. ಗ್ರಾಮಸ್ಥರು ಇದರ ಸದಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.



ಗ್ರಾ.ಪಂ ಅಧ್ಯಕ್ಷ ಅಪ್ಪಣ್ಣ ಇನಾಮತಿ ಮಾತನಾಡಿ, ಪ್ರತಿ ವರ್ಷ ಏಪ್ರಿಲ್ ಮೊದಲ ವಾರದಿಂದಲೇ ಗ್ರಾಮದ ಜನರಿಗೆ ಉದ್ಯೋಗ ಖಾತ್ರಿ ಸಮುದಾಯ ಕಾಮಗಾರಿ ಆರಂಭಿಸುವ ರೂಢಿ ಇದೆ. ಗ್ರಾಮದ ಪ್ರತಿ ಕುಟುಂಬದವರಿಗೂ ಇದು ಅನಕೂಲವಾಗಿದೆ. ಸರಕಾರ ಪಾರ್ದಶಕ ಆಡಳಿತಕ್ಕಾಗಿ ಹಲವು ಹೊಸ ಹೊಸ ಉಪ ಕ್ರಮಗಳನ್ನು ಜಾರಿಗೊಳಿಸುತ್ತುದ್ದು, ನಾವು ನೀವೆಲ್ಲ ಅವುಗಳನ್ನು ಪಾಲಿಸಿಕೊಂಡು ಮುಂದುವರೆಯಬೇಕು ಎಂದರು.

> ತಾ.ಪಂ ಸಹಾಯಕ ನಿರ್ದೇಶಕರಾದ (ಗ್ರಾ.ಉ) ಕುಮಾರ ಪೂಜಾರ ಮಾತನಾಡಿ, ಉದ್ಯೋಗ ಖಾತ್ರಿ ಸಮುದಾಯ ಕಾಮಗಾರಿಗಳ ಹಾಜರಾತಿ ಕಡ್ಡಾಯವಾಗಿ ಎನ್‌ಎಂಎಂಎಸ್ ತಂತ್ರಾಂಶದಲ್ಲಿ ಪ್ರತಿದಿನ ಎರಡು ಬಾರಿ ಅಳವಡಿಸಬೇಕು. ಗ್ರಾಮೀಣ ಪ್ರದೇಶದ ಬಡ ಅಕುಶಲ ಕೂಲಿ ಕಾರ್ಮಿಕರಿಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರಾದ ಅಶೋಕ ಶಿರಹಟ್ಟಿ, ಮುತ್ತಣ್ಣ ಸುಕಂದ, ವೀರಣ್ಣ ಕೋರಿ, ಯಲ್ಲಪ್ಪ ಬೇವಿನಮರದ, ಬಕ್ಷಿ ತಹಸೀಲ್ದಾರ, ಗ್ರಾ.ಪಂ ಎಸ್‌ಡಿಎ ಈರಪ್ಪ ಪೂಜಾರ, ಜಿಲ್ಲಾ ಐಇಸಿ ಸಂಯೋಜಕ ವೀರಭದ್ರಪ್ಪ ಸಜ್ಜನ, ತಾಲೂಕು ಐಇಸಿ ಸಂಯೋಜಕ ವೀರೇಶ ಬಸನಗೌಡ್ರ, ಬಿಎಫ್‌ಟಿ ಸೋಮಶೇಖರ ತರಬಿನ್, ಡಿಇಓ ಶಿವಾನಂದ ಹುಬ್ಬಳ್ಳಿ, ಮೌಲಾಸಾಬ್ ಚಲ್ಲಮರದ, ಜಿಕೆಎಂ ಜಿ.ಐ. ಕಲ್ಗುಡಿ, ಕಾಯಕ ಬಂಧುಗಳು ಇದ್ದರು.

## ಉಚಿತ ಮೋತಿ ಬಿಂದು ಶಸ್ತ್ರಚಿಕಿತ್ಸೆ



■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ ಹುಲಕೋಟಿ ಹಾಗೂ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಹುಬ್ಬಳ್ಳಿ ಇವರ ಸಹಯೋಗದಲ್ಲಿ, ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಹಕಾರದಿಂದ, ಶ್ರೀ ಎಚ್.ಕೆ. ಪಾಟೀಲ ಸೇವಾ ತಂಡದ ಸಹಾಯದಿಂದ ಒಟ್ಟು 20 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ಮಾಡಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಇವರು ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ನೀಡಿದರು. ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆಯನ್ನು ಎಂ.ಎಂ. ಜೋಶಿ ಆಸ್ಪತ್ರೆಯ ಖ್ಯಾತ ವೈದ್ಯರು ನಡೆಸಿದರು. ಇದಕ್ಕೂ ಮೊದಲು ಫಲಾನುಭವಿಗಳಿಗೆ ಉಚಿತವಾಗಿ ಬಿಪಿ, ಶುಗರ್, ರಕ್ತ ತಪಾಸಣೆ ಮಾಡಲಾಯಿತು.

ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿಗಳು ಪಾಲ್ಗೊಂಡು ಸಹಾಯ-ಸಹಕಾರ ನೀಡಿ ಶಿಬಿರದ ಯಶಸ್ಸಿಗೆ ಶ್ರಮಿಸಿದರು.

## ಉಗ್ರರ ಹೀನ ಕೃತ್ಯ ಖಂಡನೀಯ

■ ವಿಜಯಸಾಕ್ಷಿ ಸುದ್ದಿ, ಗದಗ



ಇತ್ತೀಚೆಗೆ ಕಾಶ್ಮೀರದ ಪಹಲ್ಗಾಮ್‌ದಲ್ಲಿ ಯಾತ್ರಿಕರ ಮೇಲೆ ಉಗ್ರರಿಂದ ನಡೆದ ಗುಂಡಿನ ದಾಳಿ ಅತ್ಯಂತ ಖಂಡನೀಯವಾದುದು. ಅನೇಕ ಅಮಾಯಕರು ಈ ಗುಂಡಿನ ದಾಳಿಯಲ್ಲಿ ತಮ್ಮ ಪ್ರಾಣವನ್ನು ಕಳೆದುಕೊಂಡಿದ್ದಾರೆ. ಯಾವ ಧರ್ಮವೂ ಹಿಂಸೆಯನ್ನು ಪ್ರಚೋದಿಸುವುದಿಲ್ಲ. ಧರ್ಮದ ಹೆಸರಿನಲ್ಲಿ ನಡೆಯುವ ಇಂತಹ ಹೀನ ಕೃತ್ಯಗಳನ್ನು ಪಕ್ಷಾತೀತ ಮತ್ತು ಜಾತ್ಯಾತೀತವಾಗಿ ಖಂಡಿಸುವುದಲ್ಲದೆ ಭಯೋತ್ಪಾದಕರ ವಿರುದ್ಧ ನಡೆವ ಹೋರಾಟಕ್ಕೆ ಪ್ರತಿಯೊಬ್ಬರೂ ಬೆಂಬಲವಾಗಿ ನಿಲ್ಲಬೇಕೆಂದು ಗದಗ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮನವಿ ಮಾಡಿಕೊಂಡಿದ್ದಾರೆ.

ಈ ಕುರಿತು ನೀಡಿರುವ ಪತ್ರಿಕಾ ಪ್ರಕಟಣೆಯಲ್ಲಿ, ಭಯೋತ್ಪಾದನೆಯನ್ನು ಮಟ್ಟಹಾಕಲು ಸರಕಾರ ಉಗ್ರ ಕ್ರಮಗಳನ್ನು ಕೈಗೊಳ್ಳಬೇಕು. ಕಾಶ್ಮೀರದಲ್ಲಿ ಶಾಶ್ವತವಾಗಿ ಶಾಂತಿ ನೆಲೆಸುವಂತಾಗಬೇಕೆಂಬುದು ಪ್ರತಿಯೊಬ್ಬ ಭಾರತೀಯ ಪ್ರಜೆಯ ಮನೋಗತವಾಗಿದೆ. ಈ ದಿಶೆಯಲ್ಲಿ ಭಾರತ ಸರಕಾರ ಕೈಗೊಳ್ಳುವ ಎಲ್ಲ ಕಾನೂನಾತ್ಮಕ ಕ್ರಮಗಳಿಗೆ ಭಾರತೀಯರೆಲ್ಲರೂ ಬೆಂಬಲವಾಗಿ ನಿಲ್ಲುವುದು ಇಂದಿನ ಅಗತ್ಯವಾಗಿದೆ ಎಂದು ತಿಳಿಸಿರುವ ಶ್ರೀಗಳು, ಉಗ್ರರ ಈ ದಾಳಿಯಲ್ಲಿ ಹತರಾದ ಎಲ್ಲರಿಗೂ ಭಗವಂತ ಚಿರಶಾಂತಿಯನ್ನು ದಯಪಾಲಿಸಲಿ ಮತ್ತು ಅವರ ಪರಿವಾರದ ಎಲ್ಲ ಸದಸ್ಯರಿಗೆ ಅಗಲುವಿಕೆಯ ನೋವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ದಯಪಾಲಿಸಲಿ ಎಂದು ಪ್ರಾರ್ಥಿಸಿದ್ದಾರೆ.

## ಪಹಲ್ಗಾಮ್ ದಾಳಿಯಲ್ಲಿ ಹತರಾದವರಿಗೆ ಸಂತಾಪ




■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಖಂಡಿಸಿ ಭಾಜಪ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ನಗರದಲ್ಲಿ ಗಾಂಧಿ ಸರ್ಕಲ್, ಮಹೇಂದ್ರಕರ್ ಸರ್ಕಲ್ ಮಾರ್ಗವಾಗಿ ತೋಂಟದಾರ್ಯ ಮಠ, ಗಾಂಧಿ ಸರ್ಕಲ್‌ವರಗೆ ಸಾಗಿ ಮೃತರ ಸಾವಿಗೆ ಸಂತಾಪ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ್ ಅಕ್ಕಿ, ನಗರ ಮಂಡಲ ಅಧ್ಯಕ್ಷ ಸುರೇಶ್ ಮುರಲಪ್ಪನವರ, ಎಂ.ಎಂ. ಜೋಶಿ, ತೆಂಗಿನಕಾಯಿ, ವಿಜಯಕುಮಾರ್ ಗಡ್ಡಿ, ವಿಶ್ವನಾಥ ಸುಧೀರ್ ಕಾಟಿಗಾರ, ಅನಿಲ್ ಅಬ್ಬಿಗೇರಿ, ಚಂದ್ರು ತಡಸದ, ಶ್ರೀಪತಿ ಉಡುಪಿ, ರಾಘವೇಂದ್ರ ಯಳವತ್ತಿ, ಶಂಕರ್ ಕಾಕಿ, ಸುರೇಶ ಚಿತ್ತರಗಿ, ಅರವಿಂದ್ ಹುಲ್ಲೂರು, ಮಂಜುನಾಥ ಶಾಂತಗೇರಿ, ಮಹಾಂತೇಶ ಬತಖಾನಿ, ಶಿವರಾಜಗೌಡ ಹಿರೇಮನಿಪಾಟೀಲ, ರಾಜು ಹೊಂಗಲ್, ರಮೇಶ್ ಸಜ್ಜಗಾರ, ಕೆ.ಪಿ. ಕೋಟಿಗೌಡರ್, ಶ್ರೀಶೈಲ್ ಚಳಗೇರಿ, ಅಮೃತ್ ಶಾನಭೋಗರ, ದೇವೇಂದ್ರಪ್ಪ ಹೂಗಾರ, ವಿಜಯಲಕ್ಷ್ಮೀ ಮಾನ್ವಿ, ಪ್ರೀತಿ ಹೊನಗುಂಡಿ, ವಸಂತ ಹಬೀಬ್, ಸಂಜೀವ್ ಕಟವಟೆ, ನವೀನ್ ಕುರ್ತಕೋಟಿ, ನವೀನ್ ಕೋಟೆಕಲ್, ಶಶಿಧರ್ ಕಳ್ಳಿ, ಬಸವರಾಜ್ ನರೇಗಲ್, ವಿನಾಯಕ ಹೊರಕೇರಿ, ಕಾರ್ತಿಕ್ ಶಿಗ್ಲಿಮಠ, ರಾಚಯ್ಯ ಹೊಸಮಠ, ಪ್ರಕಾಶ್ ಕೊಡೇಕಲ್ ಹಾಗೂ ಪಕ್ಷದ ಹಿರಿಯರು, ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಂಪಾದಕೀಯ

### ಸಿಂಧು ನದಿ ಒಪ್ಪಂದ ರದ್ದು ಸ್ವಾಗತಾರ್ಹ ನಡೆ

ಗಡಿಯಾಚೆಗಿನ ಭಯೋತ್ಪಾದನೆಗೆ ಪಾಕಿಸ್ತಾನ ಬೆಂಬಲವನ್ನು ನಿಲ್ಲಿಸುವವರೆಗೆ ಸಿಂಧು ನದಿ ಒಪ್ಪಂದವನ್ನು ರದ್ದುಗೊಳಿಸಿರುವ ಕೇಂದ್ರ ಸರಕಾರದ ನಡೆ ಸ್ವಾಗತಾರ್ಹವಾಗಿದೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದ್ದು, ಇದು ಪಾಕಿಸ್ತಾನಕ್ಕೆ ಬಲವಾದ ಸಂದೇಶವನ್ನು ರವಾನಿಸುತ್ತದೆ.

ಸಿಂಧು ನದಿ ಒಪ್ಪಂದವು ಭಾರತ ಮತ್ತು ಪಾಕಿಸ್ತಾನದ ನಡುವೆ 1960 ರಲ್ಲಿ ವಿಶ್ವ ಬ್ಯಾಂಕ್‌ನ ಮಧ್ಯಸ್ಥಿಕೆಯಲ್ಲಿ ಏರ್ಪಟ್ಟ ಒಂದು ಜಲ ಹಂಚಿಕೆ ಒಪ್ಪಂದವಾಗಿದೆ. ಈ ಒಪ್ಪಂದವು ಸಿಂಧೂ ನದಿ ಮತ್ತು ಅದರ ಉಪನದಿಗಳ ನೀರನ್ನು ಹೇಗೆ ಹಂಚಿಕೊಳ್ಳಬೇಕು ಎಂಬುದನ್ನು ನಿರ್ಧರಿಸುತ್ತದೆ.

1947 ರಲ್ಲಿ ಭಾರತ ಮತ್ತು ಪಾಕಿಸ್ತಾನ ವಿಭಜನೆಯ ನಂತರ, ಸಿಂಧೂ ನದಿ ಜಲಾನಯನ ಪ್ರದೇಶದ ನೀರನ್ನು ಹಂಚಿಕೊಳ್ಳುವ ಬಗ್ಗೆ ಉಭಯ ದೇಶಗಳ ನಡುವೆ ವಿವಾದಗಳು ಉಂಟಾದವು. ವಿಶ್ವ ಬ್ಯಾಂಕ್ ಈ ವಿವಾದವನ್ನು ಬಗೆಹರಿಸಲು ಮಧ್ಯಸ್ಥಿಕೆ ವಹಿಸಿತು ಮತ್ತು ಒಂಬತ್ತು ವರ್ಷಗಳ ಸುದೀರ್ಘ ಮಾತುಕತೆಗಳ ನಂತರ 1960 ರ ಸೆಪ್ಟೆಂಬರ್ 19 ರಂದು ಕರಾಚಿಯಲ್ಲಿ ಈ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಭಾರತದ ಪ್ರಧಾನ ಮಂತ್ರಿ ಜವಾಹರಲಾಲ್ ನೆಹರು ಮತ್ತು ಪಾಕಿಸ್ತಾನದ ಅಧ್ಯಕ್ಷ ಅಯೂಬ್ ಖಾನ್ ಅವರು ಈ ಒಪ್ಪಂದಕ್ಕೆ ಸಹಿ ಹಾಕಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಭಾರತವು ಭಯೋತ್ಪಾದನೆಗೆ ಪಾಕಿಸ್ತಾನದ ಬೆಂಬಲವನ್ನು ಖಂಡಿಸಿ ಒಪ್ಪಂದವನ್ನು ಅಮಾನತುಗೊಳಿಸಿದೆ. ಇದು ಉಭಯ ದೇಶಗಳ ನಡುವೆ ಉದ್ವಿಗ್ನತೆಯನ್ನು ಹೆಚ್ಚಿಸಿದೆ.

ಆದರೆ ಭಯೋತ್ಪಾದನೆಗೆ ಪ್ರಚೋದನೆ, ಭಯೋತ್ಪಾದಕರಿಗೆ ಆಶ್ರಯ ನೀಡುವ ದೇಶಕ್ಕೆ ಜಲಸಂಪನ್ಮೂಲವನ್ನು ಕೊಡುವುದು ನ್ಯಾಯವಲ್ಲ ಎನ್ನುವ ನಿರ್ಧಾರ ಉತ್ತಮವಾಗಿದೆ.

ಭಾರತ ಸರಕಾರದ ಕ್ರಮಕ್ಕೆ ಪಾಕಿಸ್ತಾನವೂ ತಿರುಗೇಟು ನೀಡಿ, ದ್ವಿಪಕ್ಷೀಯ ಸಂಬಂಧವನ್ನು ಕಡಿದುಕೊಂಡಿದೆ. ಹೀಗಾಗಿ ಭಾರತ ಇನ್ನಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು. ಭಯೋತ್ಪಾದನೆಯನ್ನು ಬೇರು ಸಹಿತ ಕಿತ್ತೊಗೆಯಲು ಸಿಂಧು ನದಿ ಒಪ್ಪಂದ ಮುನ್ನುಡಿ ಆಗಲಿ.


---

ಇಂದು ಜರುಗುತ್ತಿರುವ 'ಬಾಲಕೃಷ್ಣ ಸಾಹಿತ್ಯ ಪುರಸ್ಕಾರ-2025'ರ ನಿಮಿತ್ತ ವಿಶೇಷ ಲೇಖನ

# 'ಬಾಲಕೃಷ್ಣ ಸಾಹಿತ್ಯ ವೇದಿಕೆ' ನಡೆದುಬಂದ ದಾರಿ

1999ರ ಡಿಸೆಂಬರ್‌ನಲ್ಲಿ ಗದಗನಲ್ಲಿ ಭೇಟಿಯಾದ ಡಾ. ಶ್ಯಾಮಸುಂದರ ಬಿದರಕುಂದಿಯವರ ಎದುರಿಗೆ ನಿವೃತ್ತ ಶಿಕ್ಷಕ ಅರುಣ ಕುಲಕರ್ಣಿಯವರು ವಿಷಯವೊಂದನ್ನು ಪ್ರಸ್ತಾಪಿಸಿದರು. ತಮ್ಮಲ್ಲಿ ಸಾಹಿತ್ಯ, ಸಂಗೀತ, ಕಲೆಗಳ ಅಭಿರುಚಿಯನ್ನು ಬೆಳೆಸಿದ ತಮ್ಮ ತಂದೆ ಬಾಲಕೃಷ್ಣ ಅವರ ಹೆಸರಿನಲ್ಲಿ ಏನಾದರೊಂದು ಸ್ಮರಣೀಯ ಕಾರ್ಯ ಮಾಡಬೇಕೆಂಬ ಮನದಾಸೆಯನ್ನು ಅವರೆದುರಿಗೆ ವ್ಯಕ್ತಪಡಿಸಿದಾಗ ಅಸ್ತಿತ್ವಕ್ಕೆ ಬಂದಿದ್ದೇ 'ಬಾಲಕೃಷ್ಣ ಸಾಹಿತ್ಯ ವೇದಿಕೆ'. ಈ ವೇದಿಕೆಯಡಿಯಲ್ಲಿ ಪ್ರತಿ ವರ್ಷ ಓರ್ವ ಸಾಹಿತಿ, ಕಲಾವಿದನನ್ನು ಗುರುತಿಸಿ ಅವರಿಗೆ 'ಬಾಲಕೃಷ್ಣ ಸಾಹಿತ್ಯ ಪುರಸ್ಕಾರ' ನೀಡುವ ಕ್ರಮವನ್ನು ಜಾರಿಗೊಳಿಸಲಾಯಿತು.

ವೇದಿಕೆ ಅಸ್ತಿತ್ವಕ್ಕೆ ಬಂದ ಮರುಕ್ಷಣದಿಂದಲೇ ಪುರಸ್ಕಾರ ಸಮಾರಂಭವನ್ನು ಏರ್ಪಡಿಸುವ ನಿರ್ಧಾರವನ್ನು ಮಾಡಲಾಯಿತು. ಅದರಂತೆ 2000ನೇ ಇಸ್ವಿಯಲ್ಲಿ ಬಾಲಕೃಷ್ಣ ಸಾಹಿತ್ಯ ಪುರಸ್ಕಾರದ ಮೊತ್ತ ಮೊದಲ ಕಾರ್ಯಕ್ರಮ ಜನವರಿಯಲ್ಲಿ ನಡೆಯಿತು. ಆಗ ಪಟ್ಟಣದಲ್ಲಿ ಜೇವರ್ಗಿಯವರ ವಿಶ್ವಜ್ಯೋತಿ ಪಂಚಾಕ್ಷರ ನಾಟ್ಯ ಸಂಘ ಎಂಬ ನಾಟಕ ಕಂಪನಿಯೊಂದು ಬೀಡು ಬಿಟ್ಟಿತ್ತು. ಅದರ ಮಾಲೀಕರಾದ ಶ್ರೀ ರಾಜಣ್ಣ ಜೇವರ್ಗಿಯವರು ಕುಲಕರ್ಣಿಯವರಿಗೆ ಆತ್ಮೀಯರಾಗಿದ್ದರು. ಹೀಗಾಗಿ ಈ ನಾಟಕ ಶಾಲೆಯಲ್ಲಿಯೇ ವೇದಿಕೆಯ ಮೊದಲ ಕಾರ್ಯಕ್ರಮ ಜರುಗಿತು.





ಕತೆಗಾರ ರಾಮಚಂದ್ರ ಭಾವೆಯವರಿಗೆ ಮೊದಲ ಪುರಸ್ಕಾರ ನೀಡುವ ಮೂಲಕ ಪ್ರಾರಂಭವಾದ ಬಾಲಕೃಷ್ಣ ಸಾಹಿತ್ಯ ವೇದಿಕೆಯ ಪುರಸ್ಕಾರವು 2017ರವರೆಗೆ ಅವ್ಯಾಹತವಾಗಿ 18 ವರ್ಷಗಳ ಕಾಲ ಮುನ್ನಡೆಯಿತು. ಭಾವಕವಿ ಶ್ರೀ ಸತ್ಯಾನಂದ ಪಾತ್ರೋಟ, ಸಂಶೋಧಕಿ ಹನುಮಾಕ್ಷಿ ಗೋಗಿ, ನಾಡಿನ ಹಾಸ್ಯ ದಿಗ್ಗಜ ಗಂಗಾವತಿಯ ಪ್ರಾಣೇಶ, ರಂಗಕರ್ಮಿ ಪಿ. ಗಂಗಾಧರ ಸ್ವಾಮಿ, ಕವಿ ಧರಣೇಂದ್ರ ಕುರಕುರಿ, ಲೇಖಕ ವೆಂಕಟೇಶ ಮಾಚಕನೂರ, ಸಂಶೋಧಕ ಡಾ. ಶೀಲಾಕಾಂತ ಪತ್ತಾರ ಹೀಗೆ ಎಲೆಮರೆಯ ಕಾಯಿಯಂತಿದ್ದ ಅನೇಕ ಸಾಧಕರನ್ನು ಗುರುತಿಸಿ ಅವರಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು. ಜೊತೆಗೆ ಸಮಾಜದಲ್ಲಿ ತಮ್ಮ ಸಾಧನೆಯ ಮೂಲಕ ಹೆಸರು ಮಾಡಿದ ಅನೇಕ ಸಾಧಕರಿಗೂ ಸನ್ಮಾನ ನೆರವೇರಿತು.

ಬಾಲಕೃಷ್ಣ ಸಾಹಿತ್ಯ ಪುರಸ್ಕಾರ ಪ್ರದಾನ ಸಮಾರಂಭಕ್ಕೆ ನಾಡಿನ ಹೆಸರಾಂತ ಸಾಹಿತಿಗಳು ಆಗಮಿಸಿದ್ದು, ಅವರನ್ನು ಕಣ್ಣಾರೆ ಕಾಣುವ ಭಾಗ್ಯ ನರೇಗಲ್ಲ-ಕೋಡಿಕೊಪ್ಪದ ಜನತೆಯದ್ದಾಯಿತು. ಹನಿಗವನಗಳ ರಾಜ ಡುಂಡಿರಾಜ, ಚಂದ್ರಶೇಖರ ವಸ್ತ್ರದ, ಶ್ರೀನಿವಾಸ ವಾಡಪ್ಪಿ ಸೇರಿದಂತೆ ನಾಡಿನ ಅನೇಕ ಹಿರಿ-ಕಿರಿಯ ಸಾಹಿತಿಗಳು ನರೇಗಲ್ಲಿಗೆ ಬಂದು ತಮ್ಮ ಮಾತುಗಳ ಮೂಲಕ ಸಾಹಿತ್ಯದ ರಸದೌತಣವನ್ನು ಉಣಬಡಿಸಿದರು.

ಹಾಲಕೆರೆಯ ಅಂದಿನ ಪೀಠಾಧಿಪತಿಗಳಾಗಿದ್ದ ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರೂ ಸಹ ಒಂದು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ವಹಿಸಿ, ವೇದಿಕೆಯ ಚಟುವಟಿಕೆಗಳನ್ನು ಕಂಡು ಬೆನ್ನುತಟ್ಟಿದ್ದು ತಮ್ಮ ಜೀವನದ ಸೌಭಾಗ್ಯ ಎಂದು ನೆನೆಯುತ್ತಾರೆ ಕುಲಕರ್ಣಿಯವರು. ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರ ಮಾರ್ಗದರ್ಶನ-ಆಶೀರ್ವಾದ, ಭೈರನಹಟ್ಟಿಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳವರ ಮಾರ್ಗದರ್ಶನವನ್ನೂ ಕೃತಜ್ಞತೆಯಿಂದ ಸ್ಮರಿಸುತ್ತಾರೆ.

ನಾಟಕ ಮಂಟಪದಲ್ಲಿ ಮೊದಲ ಕಾರ್ಯಕ್ರಮದ ನಂತರ ವೇದಿಕೆಯ ಕಾರ್ಯಕ್ರಮ ತರುವಾಯ ಗಾಂಧಿ ಭವನಕ್ಕೆ ಸ್ಥಳಾಂತರಗೊಂಡಿತು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿಯ ಅಧಿಕಾರಿಗಳು, ಸಿಬ್ಬಂದಿಯವರು ನೀಡಿದ ಸಹಕಾರವನ್ನು ಎಂದಿಗೂ ಮರೆಯುವಂತಿಲ್ಲ. ಆದರೆ ಗಾಂಧಿ ಭವನದ ಈಗಿನ ಸ್ಥಿತಿಯನ್ನು ಕಂಡು ಮನ ಮರಗುತ್ತಿದೆ ಎನ್ನುತ್ತಾರೆ ಕುಲಕರ್ಣಿಯವರು.

2018ರಲ್ಲಿ ಕುಲಕರ್ಣಿಯವರ ತಾಯಿಯವರಾದ ಮೈನಾವತಿ ಕುಲಕರ್ಣಿಯವರು ವಯೋಸಹಜ ಅನಾರೋಗ್ಯಕ್ಕೆ ತುತ್ತಾದರು. ಹೀಗಾಗಿ ಅಂದಿನಿಂದ ಕೆಲವು ವರ್ಷಗಳ ಕಾಲ ವೇದಿಕೆಯ ಚಟುವಟಿಕೆಗಳನ್ನು ನಿಲ್ಲಿಸಬೇಕಾಯಿತು. ಅವರು ಬಾಲಕೃಷ್ಣ ಸಾಹಿತ್ಯ ವೇದಿಕೆಯ ಅಧ್ಯಕ್ಷರೂ ಆಗಿದ್ದರು. 2019ರ ಡಿಸೆಂಬರ್ 22ರಂದು ಅವರ ತಾಯಿಯವರು ನಿಧನರಾದ ಪ್ರಯುಕ್ತ ವೇದಿಕೆಯ ಕಾರ್ಯಕ್ರಮಗಳನ್ನು ನಿಲ್ಲಿಸಲಾಯಿತು. ಮತ್ತೆ ಕಾರ್ಯಕ್ರಮ ಪ್ರಾರಂಭಿಸಬೇಕೆಂದರೆ ಕೊರೊನಾ ಮಾರಿ ವಕ್ಕರಿಸಿತು. ಎರಡು ಮೂರು ವರ್ಷ ಬಿಡದೆ ಕಾಡಿದ ಮಾರಿಯ ಕಾರಣದಿಂದ, ಇನ್ನಿತರ ಕಾರಣಗಳಿಂದ ವೇದಿಕೆಯ



ಕಾರ್ಯಗಳು ಕುಂಠಿತಗೊಂಡವು.

2020ರಲ್ಲಿ ಇಂದಿನ ಬಾಲಕೃಷ್ಣ ಸಾಹಿತ್ಯ ಪುರಸ್ಕೃತರಾದ ಅನಂತ ದೇಶಪಾಂಡೆಯವರಿಗೆ ಆಹ್ವಾನ ನೀಡಲಾಗಿತ್ತು. ಆದರೆ ಕೊರೊನಾ ಕಾರಣದಿಂದ ಕಾರ್ಯಕ್ರಮ ಮುಂದಕ್ಕೆ ಹೋಯಿತು. ಅಂದು ಮುಂದಕ್ಕೆ ಹೋದ ಕಾರ್ಯಕ್ರಮ ಈ ವರ್ಷ ಎಪ್ರಿಲ್ 26ರಂದು ಮತ್ತೆ ಪರಮಪೂಜ್ಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರ ಆಶೀರ್ವಾದದಿಂದ ಪ್ರಾರಂಭಗೊಳ್ಳುತ್ತಿರುವುದು ವೇದಿಕೆಯ ಅಭಿಮಾನಿಗಳಲ್ಲಿ ಸಂತಸ ತುಂಬಿದೆ. ಶ್ರೀ ಅನ್ನದಾನೇಶ್ವರ ಪದವಿ ಕಾಲೇಜಿನ ಸಭಾಂಗಣದಲ್ಲಿ ನಡೆಯುತ್ತಿರುವ 2025ರ ಬಾಲಕೃಷ್ಣ ಸಾಹಿತ್ಯ ಪುರಸ್ಕಾರ ಸಮಾರಂಭಕ್ಕೆ ನೀವೂ ಬನ್ನಿ, ನಿಮ್ಮವರೆಲ್ಲರನ್ನೂ ಕರೆತನ್ನಿ.

**- ಚಿದಂಬರ ಕುಲಕರ್ಣಿ.**
ನರೇಗಲ್ಲ-ಕೋಡಿಕೊಪ್ಪ.

---

# ಹೊಸ ರೈಲುಮಾರ್ಗ ಪ್ರಾರಂಭಿಸಲು ಮನವಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಮುಂಡರಗಿ-ಹಡಗಲಿ ಹೊಸ ರೈಲು ಮಾರ್ಗವನ್ನು ಶೀಘ್ರ ಪ್ರಾರಂಭಿಸಲು ಆಗ್ರಹಿಸಿ ರೈಲ್ವೆ ಇಂಜಿನ್ ಸ್ಥಬ್ಧಚಿತ್ರ ಮೆರವಣಿಗೆಯೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮುಂಡರಗಿ ತಾಲೂಕಾ ರೈಲ್ವೆ ಹೋರಾಟ ಸಮಿತಿ ಅಧ್ಯಕ್ಷ ಬಸವರಾಜ ಎಸ್.ದೇಸಾಯಿ ನೇತೃತ್ವದಲ್ಲಿ ಮುಂಡರಗಿ ತಹಸೀಲ್ದಾರರು, ರೈಲ್ವೆ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಸವರಾಜ ದೇಸಾಯಿ ಮಾತನಾಡಿ, ಹೊಸ ರೈಲು ಮಾರ್ಗಕ್ಕಾಗಿ ಗದಗ-ಹರಪನಹಳ್ಳಿ-ಮುಂಡರಗಿ-ಹೂವಿನಹಡಗಲಿ ಸಾರ್ವಜನಿಕರು ಕಳೆದ 15 ವರ್ಷಗಳಿಂದ ವಿವಿಧ ರೀತಿಯಲ್ಲಿ ಪ್ರತಿಭಟನೆ ನಡೆಸಿದ್ದಾರೆ. ಆದರೂ ನಮ್ಮ ಬೇಡಿಕೆ ಈಡೇರಿಲ್ಲ. ಈ ಭಾಗದ ಜನರ ಬಹುದಿನಗಳ ಬೇಡಿಕೆಯಾದ ಹೊಸ ರೈಲು ಮಾರ್ಗದ ಕಾಮಗಾರಿಯನ್ನು ಶೀಘ್ರವೇ ಪ್ರಾರಂಭಿಸಲು ಮನವಿ ಮಾಡಿದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಎಲ್. ನಾರಾಯಣಸ್ವಾಮಿ, ವಾದಿರಾಜ ಕೌಜಲಗಿ, ಲೋಹಿತ ಕಾಸರ, ಗವಿಸಿದ್ದಪ್ಪ ಬನ್ನಿಕೊಪ್ಪ, ಬಸವರಾಜ ನವಲಗುಂದ, ಬಸಪ್ಪ ಬಂಡಿ, ನಾಗರಾಜ ಹೊಂಬಳಗಟ್ಟಿ, ರಾಜಾಭಕ್ಷಿ ಬೆಟಗೇರಿ, ಸಂತೋಷ ಹಿರೇಮನಿ, ಪವನ ಮೇಟಿ, ಈರಮ್ಮ ತಾಳಿಕೋಟಿ, ರಶ್ಮಿ ಹಂಚಿನಾಳ, ಜಾನಕಿ ರೋಣದ, ಜ್ಯೋತಿ ರೋಣದ, ಐಶ್ವರ್ಯ ಪೂಜಾರ, ಸಚಿನ್ ಕುಮಾರ ದೇಸಾಯಿ, ಸಂಜಯ ರಂಗಣ್ಣವರ ಸೇರಿದಂತೆ ಮುಂಡರಗಿ ತಾಲೂಕಿನ ಗ್ರಾಮಸ್ಥರು, ರೈತರು, ಹಲವು ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು.

---

# ರಾಮನಗರದ ಹೆಸರನ್ನು ಹೇಗೆ ಬದಲಾವಣೆ ಮಾಡಬೇಕು ಎಂಬುದು ನನಗೆ ಗೊತ್ತು

**■ ವಿಜಯಸಾಕ್ಷಿ ಸುದ್ದಿ, ಮೈಸೂರು**

ರಾಮನಗರದ ಹೆಸರನ್ನು ಹೇಗೆ ಬದಲಾವಣೆ ಮಾಡಬೇಕು ಎಂಬುದು ನನಗೆ ಗೊತ್ತು ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ನನಗೆ ರಾಮನಗರದ ಹೆಸರನ್ನು ಹೇಗೆ ಬದಲಾವಣೆ ಮಾಡಬೇಕು ಎಂಬುದು ಗೊತ್ತಿದೆ.

ನಾನು ಮಾಡಿಯೇ ಸಿದ್ಧ. ಇದು ಬೆಂಗಳೂರು ದಕ್ಷಿಣವೇ. ನಾವು ಯಾರೂ ಸಹ ಹೊರಗಡೆಯಿಂದ ಬಂದು ಹೆಸರು ಕೊಡಿ ಎಂದು ಕೇಳುತ್ತಿಲ್ಲ. ಇದು ನಮ್ಮ ಹಕ್ಕು. ನಮ್ಮ ತಂದೆ ತಾಯಿ, ಹುಟ್ಟು ಹೆಸರನ್ನು ಬದಲಾವಣೆ ಮಾಡಿಕೊಳ್ಳಲು ಆಗುತ್ತದೆಯೇ? ಎಂದು ಹೇಳಿದರು.

ಇನ್ನೂ ಕಾಶ್ಮೀರದಲ್ಲಿ ಉಗ್ರರ ಅಟ್ಟಹಾಸಕ್ಕೆ ಭದ್ರತಾ ವೈಫಲ್ಯ ಕಾರಣನಾ ಎನ್ನುವ ವಿಚಾರಕ್ಕೆ ಕೇಂದ್ರ ಸರ್ಕಾರದ ಪರ ಡಿಸಿಎಂ ಡಿಕೆ ಶಿವಕುಮಾರ್ ಸಾಫ್ಟ್ ಕಾರ್ನರ್ ತೋರಿದ್ದಾರೆ. ನಾನು ಇಲ್ಲಿ ಬ್ಲೇಮ್ ಗೇಮ್ ಮಾಡುವುದಿಲ್ಲ, ಯಾರ ವಿರುದ್ಧವೂ ಮಾತನಾಡುವುದಿಲ್ಲ.

ಪಕ್ಷದ ಅಧ್ಯಕ್ಷ ಹಾಗೂ ಡಿಸಿಎಂ ಆಗಿ ಹೇಳುತ್ತಿದ್ದೇನೆ, ಈ ವಿಚಾರದಲ್ಲಿ ರಾಜಕೀಯ ಯಾವುದೇ ಕಾರಣಕ್ಕೂ ಮಾಡಬಾರದು. ಹೊರದೇಶದಿಂದ ಬಂದು ಶಾಂತಿ ಕದಡುವ ಕೆಲಸ ಮಾಡಿದ್ದಾರೆ, ಅವರನ್ನು ಮುಗಿಸುವ ಕೆಲಸ ಆಗಬೇಕು. ಕೇಂದ್ರ ಸರ್ಕಾರ ಹೀಗಾಗಲೇ ಆ ಕೆಲಸ ಮಾಡಿದೆ. ಈ ವಿಚಾರವಾಗಿ ನಮ್ಮ ಸಂಪೂರ್ಣ ಸಹಕಾರ ಇರಲಿದೆ ಎಂದರು.

---



ಗದಗ ನಗರದಲ್ಲಿ ಭಾರತೀಯ ಜನತಾ ಪಾರ್ಟಿ ಆಯೋಜಿಸಿದ್ದ ಜನಾಕ್ರೋಶ ಯಾತ್ರೆ ಸಂದರ್ಭದಲ್ಲಿ ಜಿಲ್ಲಾ ಮನ್ ಕಿ ಬಾತ್ ಸಂಚಾಲಕರಾದ ರಾಚಯ್ಯ ಹೊಸಮಠ ಅವರು ಭಾರತೀಯ ಜನತಾ ಪಾರ್ಟಿಯ ರಾಜ್ಯಾಧ್ಯಕ್ಷ ಬಿ.ವಾಯ್. ವಿಜಯೇಂದ್ರ ಅವರಿಗೆ ಜ.ತೋಂಟದಾರ್ಯ ಹಾಗೂ ಡಾ. ಪಂಡಿತ ಪುಟ್ಟರಾಜರ ಭಾವಚಿತ್ರ ನೀಡಿ ಸ್ವಾಗತಿಸಿದರು. ಪಕ್ಷದ ಪ್ರಮುಖರಾದ ಶ್ರೀಪತಿ ಉಡುಪಿ, ಪ್ರಶಾಂತ ನಾಯ್ಕರ್, ಸಿದ್ದೇಶ ಹೂಗಾರ ಸೇರಿದಂತೆ ಹಲವರಿದ್ದರು.

---

ಗಂಜಿ ಬಸವೇಶ್ವರ ಜಾತ್ರಾ ಮಹೋತ್ಸವದ ನಿಮಿತ್ತ

# ಕಳಸಾರೋಹಣ, ಶ್ರೀನಂದಿ ಧ್ವಜಾರೋಹಣ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಉಸುಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ ದೇವರ 63ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಎಪ್ರಿಲ್ 26ರಂದು ಬೆಳಿಗ್ಗೆ 8.30ಕ್ಕೆ ಸಿದ್ರಾಮಪ್ಪ ಹುಂಬಿ ಇವರ ಮನೆಯಿಂದ ಕಳಸದ ಭವ್ಯ ಮೆರವಣಿಗೆಯೊಂದಿಗೆ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಗದಗ ವಿಭಾಗದ ಮಾಜಿ ಅಧ್ಯಕ್ಷ ಎಮ್.ಎಸ್. ಕರಿಗೌಡ್ರ ಇವರ ಅಮೃತಹಸ್ತದಿಂದ ಕಳಸಾರೋಹಣ ಕಾರ್ಯಕ್ರಮ ನೆರವೇರುವುದು.



ಇದೇ ಸಂದರ್ಭದಲ್ಲಿ ವಿಶ್ರಾಂತ ಸಹಾಯಕ ತೋಟಗಾರಿಕೆ ನಿರ್ದೇಶಕ ಸುರೇಶ ವ್ಹಿ.ಕುಂಬಾರರ ಅಮೃತ ಹಸ್ತದಿಂದ ಶ್ರೀನಂದಿ ಧ್ವಜಾರೋಹಣ ನೆರವೇರುವುದು. ಭಕ್ತಾದಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಜಾತ್ರಾ ಕಮಿಟಿಯ ಪದಾಧಿಕಾರಿಗಳು, ಸರ್ವ ಸದಸ್ಯರು ವಿನಂತಿಸಿದ್ದಾರೆ.


---

# ಸಮಾಜದಲ್ಲಿ ಒಂದು ಧರ್ಮ, ಜಾತಿಯಿಂದ ನ್ಯಾಯ ಕೊಡಲು ಸಾಧ್ಯವಿಲ್ಲ: ಸಿಎಂ ಸಿದ್ದರಾಮಯ್ಯ!

**■ ವಿಜಯಸಾಕ್ಷಿ ಸುದ್ದಿ, ಚಾಮರಾಜನಗರ**

ಸಮಾಜದಲ್ಲಿ ಒಂದು ಧರ್ಮ, ಜಾತಿಯಿಂದ ನ್ಯಾಯ ಕೊಡಲು ಸಾಧ್ಯವಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ನಾನು ಸಿಎಂ ಆಗಿರುವವರೆಗೆ ಎಲ್ಲಾ ವರ್ಗದ ಜನರ ಪರವಾಗಿ ಇರುತ್ತೇನೆ. ನಾನು ಒಂದು ಧರ್ಮದ ಪರವಾಗಿ ಇಲ್ಲ. ನಮ್ಮ ಜನರನ್ನು ಮರೆಯುವುದಿಲ್ಲ. ಸಮಾಜದಲ್ಲಿ



ಒಂದು ಧರ್ಮ, ಜಾತಿಯಿಂದ ನ್ಯಾಯ ಕೊಡಲು ಸಾಧ್ಯವಿಲ್ಲ. ಎಲ್ಲರ ಬೆಂಬಲ ಹಾಗೂ ಸಹಕಾರ ಮುಖ್ಯವಾಗಿದೆ. ಇಡೀ ರಾಜ್ಯದಲ್ಲಿ ಅಹಿಂದ ವರ್ಗದ ಜನರು ಹಾಗೂ ಬಡವರು ಸಹಾಯ ಮಾಡಿದ್ದಾರೆ. ಸಿಎಂ ಆಗುವುದು ಅಷ್ಟು ಸುಲಭದ ಕೆಲಸವಲ್ಲ ಎಂದರು.

ಚಾಮರಾಜನಗರವು ಬಹಳ ಹಿಂದುಳಿದ ಜಿಲ್ಲೆಯಾಗಿದೆ. ಈ ಜಿಲ್ಲೆಯಲ್ಲಿ ಶಿಕ್ಷಣ ಕಡಿಮೆ. ಶಿಕ್ಷಣಕ್ಕೆ ಆದ್ಯತೆ ಕೊಡಬೇಕಾಗಿದೆ. ಸಮುದಾಯ ಭವನದಲ್ಲಿ ಹಾಸ್ಟೆಲ್ ಮತ್ತು ಶಿಕ್ಷಣ ಭವನವನ್ನು ಮಾಡಬೇಕು.

---

# ದೇಶದ ಜನರ ರಕ್ತದ ಮೇಲೆ ಅಧಿಕಾರ ಹಿಡಿಯುವುದು ಬಿಜೆಪಿಯ ಚಟವಾಗಿದೆ!

**■ ವಿಜಯಸಾಕ್ಷಿ ಸುದ್ದಿ, ಮೈಸೂರು**

ದೇಶದ ಜನರ ರಕ್ತದ ಮೇಲೆ ಅಧಿಕಾರ ಹಿಡಿಯುವುದು ಬಿಜೆಪಿಯ ಚಟವಾಗಿದೆ ಎಂದು ಕಾಂಗ್ರೆಸ್ ವಕ್ತಾರ ಎಂ.ಲಕ್ಷ್ಮಣ್ ಕಿಡಿಕಾರಿದ್ದಾರೆ.

ಮೈಸೂರಿನಲ್ಲಿ ಮಾತನಾಡಿದ ಅವರು, ದೇಶದ ಜನರ ರಕ್ತದ ಮೇಲೆ ಅಧಿಕಾರ ಹಿಡಿಯುವುದು ಬಿಜೆಪಿಯ ಚಟವಾಗಿದೆ. ಪಹಲ್ಗಾಮ್‌ನಲ್ಲಿ ಮುಸ್ಲಿಮರೇ ಬಹಳಷ್ಟು ಜನರನ್ನು ಕಾಪಾಡಿದ್ದಾರೆ. ಧರ್ಮದ ಹೆಸರು ಕೇಳಿ ಯಾರನ್ನೂ ಅಲ್ಲಿ



ಕೊಂದಿಲ್ಲ. ಸುಮ್ಮನೆ ಮುಸ್ಲಿಮರು, ಮುಸ್ಲಿಮರು ಎಂದು ಬಿಜೆಪಿ ಅಪಪ್ರಚಾರ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಘಟನೆ ನಡೆದ ದಿನ ಅಲ್ಲಿ ಸೇನೆ ಮತ್ತು ಪೊಲೀಸ್ ಯಾಕೆ ಇರಲಿಲ್ಲ. ಇದರ ಹಿಂದೆ ಬೇರೆ ಏನೋ ಉದ್ದೇಶವಿದೆ. ಈ ಬಗ್ಗೆ ಅಂತಾರಾಷ್ಟ್ರೀಯ ಏಜೆನ್ಸಿ ಮೂಲಕ ತನಿಖೆ ಆಗಬೇಕು. ಹಿಂದೂ, ಮುಸ್ಲಿಮರ ನಡುವೆ ಕಂದಕ ಉಂಟು ಮಾಡಿ ಚುನಾವಣೆ ಗೆಲ್ಲುವುದೇ ಬಿಜೆಪಿಯ ಉದ್ದೇಶ. ಮುಸ್ಲಿಮರೆಲ್ಲಾ ಭಯೋತ್ಪಾದಕರು ಎಂದು ಬಿಂಬಿಸುವ ಕೆಲಸ ಶುರುವಾಗಿದೆ ಎಂದು ಲಕ್ಷ್ಮಣ್ ಹೇಳಿದ್ದಾರೆ.

---

# 6ನೇ ತರಗತಿ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ, ರೋಣ ಮತ್ತು ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ। ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2025-25ನೇ ಸಾಲಿಗೆ 6ನೇ ತರಗತಿ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆ ದಿ: 27.04.2025 ರಂದು ಜರುಗಲಿದೆ.

ಅರ್ಜಿ ಸಲ್ಲಿಸಲು ನೋಂದಾಯಿಸಿದ ಪಾಲಕರ/ಪೋಷಕರ ದೂರವಾಣಿ ವಿದ್ಯಾರ್ಥಿಯ ಹೆಸರಿನೊಂದಿಗೆ ಪರೀಕ್ಷಾ ಕೇಂದ್ರದ ಮಾಹಿತಿಯನ್ನು ಮಾನ್ಯ ನಿರ್ದೇಶನಾಲಯ, ಬೆಂಗಳೂರು ಅವರಿಂದ ಕಳುಹಿಸಲಾಗಿದೆ. ಪರೀಕ್ಷಾ ಪ್ರವೇಶ ಪತ್ರಗಳನ್ನು https://domgok.in/Admission/Student Hallticket ಪಡೆದುಕೊಳ್ಳಬಹುದಾಗಿದೆ. ತಮಗೆ ನೀಡಿರುವ ಪರೀಕ್ಷಾ ಪ್ರವೇಶ ಪತ್ರಗಳಲ್ಲಿ ಸೂಚಿಸಿರುವ ಪರೀಕ್ಷಾ ಕೇಂದ್ರಕ್ಕೆ ಹಾಜರಿರಲು ಈ ಮೂಲಕ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

---

# ಆಕಸ್ಮಿಕವಾಗಿ ಗಡಿ ದಾಟಿದ ಬಿಎಸ್‌ಎಫ್ ಯೋಧನನ್ನು ಬಂಧಿಸಿದ ಪಾಕಿಸ್ತಾನ ರೇಂಜರ್‌ಗಳು

**■ ವಿಜಯಸಾಕ್ಷಿ ಸುದ್ದಿ, ಪಂಜಾಬ್**

ಬುಧವಾರ ಮಧ್ಯಾಹ್ನ ಪಂಜಾಬ್‌ನ ಫಿರೋಜ್‌ಪುರ ಜಿಲ್ಲೆಯ ಆಚೆ ಅಂತಾರಾಷ್ಟ್ರೀಯ ಗಡಿಯನ್ನು ಆಕಸ್ಮಿಕವಾಗಿ ದಾಟಿದ ಕಾರಣಕ್ಕಾಗಿ ಪಾಕಿಸ್ತಾನಿ ರೇಂಜರ್‌ಗಳು ಭಾರತದ ಗಡಿ ಭದ್ರತಾ ಪಡೆ(ಬಿಎಸ್‌ಎಫ್)ಯ ಯೋಧನನ್ನು ಬಂಧಿಸಿದ್ದಾರೆ ಎಂದು ದಿ ಹಿಂದೂ ವರದಿ ಮಾಡಿದೆ. ಬಂಧನಕ್ಕೊಳಗಾದ ಯೋಧನನ್ನು 182 ನೇ ಬೆಟಾಲಿಯನ್‌ನ ಕಾನ್‌ಸ್ಟೆಬಲ್ ಪಿಕೆ ಸಾಹು ಎಂದು ಗುರುತಿಸಲಾಗಿದ್ದು, ಅವರು ಎರಡು ದೇಶಗಳ ನಡುವಿನ ಮುಳ್ಳುತಂತಿ ಬೇಲಿಯ ಆಚೆ ಭಾರತೀಯ ರೈತರೊಂದಿಗೆ ಹೋಗುತ್ತಿದ್ದಾಗ ಬಂಧಿಸಲಾಯಿತು ಎಂದು ವರದಿಯಾಗಿದೆ.



ಆಕಸ್ಮಿಕವಾಗಿ ಗಡಿ ದಾಟಿದ ರೈತರಿಗೆ ಭಾರತೀಯ ಪ್ರದೇಶದೊಳಗೆ ಉಳಿದಿರುವ ಬೇಲಿಯ ಮುಂಭಾಗದ ಭೂಮಿಯಲ್ಲಿ ಕೆಲಸ ಮಾಡಲು ಅವಕಾಶವಿದೆ. ಈ ಭೂಮಿ ಬಿಎಸ್‌ಎಫ್ ಸಿಬ್ಬಂದಿಯ ಮೇಲ್ವಿಚಾರಣೆಯಲ್ಲಿದ್ದು, ಅಲ್ಲಿ ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ಕೆಲಸ ಮಾಡಬಹುದಾಗಿದೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. ಈ ಕಾರ್ಯಾಚರಣೆಯ ಮೇಲ್ವಿಚಾರಣೆಗೆ ನಿಯೋಜಿಸಲಾದ ಬಿಎಸ್‌ಎಫ್ ಸಿಬ್ಬಂದಿಯನ್ನು ಕಿಸಾನ್ ಗಾರ್ಡ್‌ಗಳು ಎಂದು ಕರೆಯಲಾಗುತ್ತದೆ.

ಸಾಹು ಅವರನ್ನು ಬಂಧಿಸಿದ ಸಮಯದಲ್ಲಿ, ಇಬ್ಬರು ಬಿಎಸ್‌ಎಫ್ ಜವಾನರನ್ನು ಜಲೋಕ್ ಪೋಸ್ಟ್‌ನಲ್ಲಿ ಕಿಸಾನ್ ಗಾರ್ಡ್‌ಗಳಾಗಿ ನಿಯೋಜಿಸಲಾಗಿತ್ತು. ಅಲ್ಲಿ ರೈತರು ಮುಳ್ಳುತಂತಿಯ ಉದ್ದಕ್ಕೂ ಬೆಳೆಗಳನ್ನು ಕೊಯ್ಲು ಮಾಡುತ್ತಿದ್ದರು ಎಂದು ಪತ್ರಿಕೆ ವರದಿ ಮಾಡಿದೆ.

ಪಶ್ಚಿಮ ಬಂಗಾಳದ ಹೂಗ್ಲಿ ನಿವಾಸಿಯಾಗಿರುವ ಯೋಧ ಸಾಹು ಸಮವಸ್ತ್ರದಲ್ಲಿದ್ದರು, ಬಂಧಿಸಲ್ಪಟ್ಟಾಗ ಅವರ ಸೇವಾ ಆಯುಧ ಎಕೆ -47 ರೈಫಲ್ ಅನ್ನು ಹಿಡಿದುಕೊಂಡು, ಮರದ ನೆರಳಿನಲ್ಲಿ ವಿಶ್ರಾಂತಿ ಪಡೆಯಲು ತೆರಳಿದ್ದರು ಎಂದು ದಿ ಹಿಂದೂ ವರದಿ ಮಾಡಿದೆ.

ಅವರ ಸಹೋದ್ಯೋಗಿಯೊಬ್ಬರು ಕರೆ ಮಾಡಿ ಅವರು ಕರ್ತವ್ಯದಲ್ಲಿದ್ದಾಗ ಸಿಕ್ಕಿಬಿದ್ದಿದ್ದಾರೆ ಎಂದು ನಮಗೆ ತಿಳಿಸಿದರು ಎಂದು ಸಾಹು ಅವರ ಪತ್ನಿ ಪಿಟಿಐಗೆ ತಿಳಿಸಿದ್ದಾರೆ. "ನಾನು ಕೊನೆಯ ಬಾರಿಗೆ ಮಂಗಳವಾರ ರಾತ್ರಿ ಅವರೊಂದಿಗೆ ಮಾತನಾಡಿದೆ. ಅವರು 17 ವರ್ಷಗಳಿಂದ ಬಿಎಸ್‌ಎಫ್‌ನಲ್ಲಿದ್ದಾರೆ. ಅವರು ಶೀಘ್ರದಲ್ಲೇ ಮನೆಗೆ ಮರಳಬೇಕೆಂದು ನಾನು ಬಯಸುತ್ತೇನೆ." ಎಂದು ಅವರು ಹೇಳಿದ್ದಾರೆ. ಸಾಹು ಅವರ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳಲು ರೇಂಜರ್‌ಗಳೊಂದಿಗೆ ಧ್ವಜ ಸಭೆಗಳನ್ನು ನಡೆಸಲಾಗುತ್ತಿದೆ ಎಂದು ಬಿಎಸ್‌ಎಫ್ ಅಧಿಕಾರಿಯೊಬ್ಬರು ಗುರುವಾರ ಹೇಳಿದ್ದಾರೆ ಎಂದು ದಿ ಹಿಂದೂ ವರದಿ ಮಾಡಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳು ಹದಗೆಡುತ್ತಿರುವ ಮಧ್ಯೆ ಈ ಘಟನೆ ನಡೆದಿದೆ.

# ಜಾತ್ರಾ ಮಹೋತ್ಸವದ ಅನ್ನಸಂತರ್ಪಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಉಸುಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ ದೇವರ 63ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಎಪ್ರಿಲ್ 26ರಂದು ಮಧ್ಯಾಹ್ನ 12.30 ಗಂಟೆಗೆ ಅನ್ನಸಂತರ್ಪಣೆ ಕಾರ್ಯಕ್ರಮವು ಶ್ರೀ ವೀರೇಶ್ವರ ಪುಣ್ಯಾಶ್ರಮದ ಪಟ್ಟಾಧ್ಯಕ್ಷರಾದ ಪರಮಪೂಜ್ಯ ಶ್ರೀ ಕಲ್ಲಯ್ಯಜ್ಜನವರ ಅಮೃತ ಹಸ್ತದಿಂದ ನೆರವೇರುವುದು.

ಈ ಕಾರ್ಯಕ್ರಮದಲ್ಲಿ ಭಕ್ತಾದಿಗಳು ಸದ್ಭಕ್ತರು ಪಾಲ್ಗೊಂಡು ಪ್ರಸಾದ ಸ್ವೀಕರಿಸಿ, ಗಂಜಿ ಬಸವೇಶ್ವರ ಕೃಪೆಗೆ ಪಾತ್ರರಾಗಬೇಕೆಂದು ಜಾತ್ರಾ ಕಮಿಟಿಯ ಪದಾಧಿಕಾರಿಗಳು ವಿನಂತಿಸಿದ್ದಾರೆ.

# 'ಸಹಜ ಶಿವಯೋಗ' ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಎಪ್ರಿಲ್ 27ರ ಬೆಳಿಗ್ಗೆ 7.30 ಗಂಟೆಗೆ ನಡೆಯಲಿರುವ ಬಸವದಳದ 1643ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ವಚನ ಕಂಠಪಾಠ, ವಚನ ಲಿಖಿತ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ತತ್ವ ಚಿಂತಕ ಎಸ್.ಎ. ಮುಗದ ಸಹಜ ಶಿವಯೋಗ ನಡೆಸುವರು.

ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ವಿಶ್ವಕರ್ಮ ವಿದ್ಯಾರ್ಥಿ ವಿಕಾಸ ಶಿಬಿರದ ಪ್ರಾರಂಭೋತ್ಸವದಲ್ಲಿ ಮಲ್ಲಿಕಾರ್ಜುನ ಐಲಿ

# ಮಕ್ಕಳ ಬೌದ್ಧಿಕ ವಿಕಾಸಕ್ಕೆ ಶಿಬಿರಗಳು ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಸಂಸ್ಕೃತಿ, ಸಂಸ್ಕಾರ ನೀಡುವುದು ಪಾಲಕರು ಹಾಗೂ ಸಮಾಜದ ಬಹುಮುಖ್ಯ ಜವಾಬ್ದಾರಿ. ಮಕ್ಕಳ ಬೌದ್ಧಿಕ ವಿಕಾಸಕ್ಕೆ ಬೇಸಿಗೆ ಶಿಬಿರಗಳು ಪ್ರಮುಖ ಪಾತ್ರ ವಹಿಸುತ್ತವೆ. ಈ ನಿಟ್ಟಿನಲ್ಲಿ ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ರಾಜಗೋಪಾಲ ಕಡ್ಲಿಕೊಪ್ಪ ಅವರು 'ವಿಶ್ವಕರ್ಮ ವಿದ್ಯಾರ್ಥಿ ವಿಕಾಸ' ಬೇಸಿಗೆ ಶಿಬಿರ ಆಯೋಜಿಸಿದ್ದು ಶ್ಲಾಘನೀಯ ಕಾರ್ಯ ಎಂದು ಹಿಂದುಳಿದ ವರ್ಗಗಳ ಸಮುದಾಯದ ಮಹಾಮಂಡಳಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಐಲಿ ಹೇಳಿದರು.

ಅವರು ಇಲ್ಲಿನ ವಿಜಯನಗರ ಬಡಾವಣೆಯಲ್ಲಿರುವ ಶ್ರೀ ವಿಶ್ವಕರ್ಮ ಭವನದಲ್ಲಿ ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿರುವ 'ವಿಶ್ವಕರ್ಮ ವಿದ್ಯಾರ್ಥಿ ವಿಕಾಸ' ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡುತ್ತಿದ್ದರು.



ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಹಿರಿಯ ಚಿಂತಕರಾದ ಡಾ. ಜಿ.ಬಿ. ಪಾಟೀಲ ಮಾತನಾಡಿ, ಶಿಬಿರದಲ್ಲಿ ಮಕ್ಕಳಿಗೆ ಆಧ್ಯಾತ್ಮ, ವಿಜ್ಞಾನ, ತಂತ್ರಜ್ಞಾನಗಳ ಸಾಮಾನ್ಯ ಜ್ಞಾನ ನೀಡುವುದರೊಂದಿಗೆ, ಅವರ ಬೌದ್ಧಿಕ ವಿಕಾಸಕ್ಕೆ ಸಹಕಾರಿಯಾಗುವ ನಿಟ್ಟಿನಲ್ಲಿ ರಾಜಗೋಪಾಲ ಕಡ್ಲಿಕೊಪ್ಪ ಅವರು ಶಿಬಿರ ಹಮ್ಮಿಕೊಂಡಿದ್ದು ಅವರ ಸಾಮಾಜಿಕ ಕಳಕಳಿಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಮಕ್ಕಳು ಏನನ್ನಾದರೂ ಸಾಧಿಸಬೇಕು ಎಂಬ ಛಲ ಹೊಂದಬೇಕು. ಸಾಧನೆಯ ಕುರಿತು ದೊಡ್ಡದಾಗಿ ಕನಸು ಕಾಣಬೇಕು. ಆ ಕನಸನ್ನು ನನಸಾಗಿಸಿಕೊಳ್ಳಲು ಸತತ ಪರಿಶ್ರಮ ಹಾಕಬೇಕು ಎಂದ ಅವರು, ಮಕ್ಕಳು ಶಿಬಿರದ ಸದುಪಯೋಗ ಪಡೆಯಬೇಕು ಎಂದರು. ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡಿದ್ದ ಸಾಹಿತಿ ಹಾಗೂ ವಚನ ಟಿವಿ ಪ್ರಧಾನ ಸಂಪಾದಕ ಪ್ರೊ. ಸಿದ್ದು ಯಾಪಲಪರವಿ ಅವರು 'ವ್ಯಕ್ತಿತ್ವ ವಿಕಸನ' ವಿಷಯವಾಗಿ ಮಾತನಾಡಿ, ವ್ಯಕ್ತಿ ವ್ಯಕ್ತಿತ್ವವಾಗಿ ಪರಿವರ್ತನೆ ಹೊಂದಬೇಕಾದರೆ ವಿದ್ಯಾರ್ಥಿ ಜೀವನದಲ್ಲಿ ಅಳವಡಿಸಿಕೊಳ್ಳುವ ಶಿಸ್ತು, ಬದ್ಧತೆ, ಸತತ ಪ್ರಯತ್ನ ಸಾಧನೆಗೆ ಸಹಕಾರಿಯಾಗುತ್ತದೆ. ಪ್ರತಿಯೊಬ್ಬರೂ ಜೀವನದಲ್ಲಿ ದೊಡ್ಡ ದೊಡ್ಡ ಗುರಿಗಳನ್ನು ಇಟ್ಟುಕೊಂಡು, ಕನಸು ನನಸಾಗಿಸಿಕೊಳ್ಳಲು ಕ್ರಿಯಾಶೀಲರಾದಲ್ಲಿ ಗುರಿ ಮುಟ್ಟಲು ಸಾಧ್ಯ. ಆದರ್ಶ ವ್ಯಕ್ತಿಗಳ ಸಂಪರ್ಕ, ಭಾಷಣ ಹಾಗೂ ಮೌಲಿಕ ಪುಸ್ತಕಗಳ ಸಂಪರ್ಕ ಜೀವನದ ಬದಲಾವಣೆಗೆ ಸಾಧನಗಳು. ಹೀಗಾಗಿ ಮಕ್ಕಳು ಭಾಷಣ ಕೇಳುವುದು, ಒಳ್ಳೆಯ ಪುಸ್ತಕ ಓದುವುದು ಹಾಗೂ ಸಾಧಕ ವ್ಯಕ್ತಿಗಳ ಸಲಹೆ ಪಡೆಯುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು. ಶಿಬಿರಾರ್ಥಿಗಳಿಗೆ ಸಂಧ್ಯಾವಂದನೆ ಸಾಮಗ್ರಿಗಳ ದಾನಿಗಳು ಹಾಗೂ ಅತಿಥಿಗಳಾಗಿ ಪಾಲ್ಗೊಂಡ ರೋಣ ತಾಲೂಕಾ ವಿಶ್ವಕರ್ಮ ಸಮಾಜದ ಮಾಜಿ ಅಧ್ಯಕ್ಷ ಮೌನೇಶ ಅರ್ಕಸಾಲಿ, ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ರಿಂದಮ್ಮ ತೋಟಗಂಟಿ ಹಾಗೂ ವಿಶ್ವಕರ್ಮ ಸಾಂಸ್ಕೃತಿಕ ಸಂಘದ ಅಧ್ಯಕ್ಷರಾದ ಮೌನೇಶ ಜಿ.ಬಡಿಗೇರ(ನರೇಗಲ್ಲ) ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಶಿಬಿರದ ಸಂಯೋಜಕರು ಹಾಗೂ ಶಿಕ್ಷಕರಾದ ಸುಮಂಗಲಾ ಪತ್ತಾರ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು. ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಕಮ್ಮಾರ, ಪದಾಧಿಕಾರಿಗಳು ಹಾಗೂ ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು.

# ಜ.ಫಕೀರೇಶ್ವರ ಜಾತ್ರಾ ಕಾರ್ಯಕ್ರಮ ನಾಳೆಯಿಂದ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಶಿರಹಟ್ಟಿಯ ಕರ್ತೃ ಶ್ರೀ ಜ.ಫಕೀರೇಶ್ವರ ಜಾತ್ರೆಯ ಅಂಗವಾಗಿ ಎ. 27ರಂದು ತೇರಿನ ಗಡ್ಡಿ ಹೊರಹಾಕುವುದರ ಮೂಲಕ ಜಾತ್ರಾ ಮಹೋತ್ಸವದ ಕಾರ್ಯಕ್ರಮಗಳು ಪ್ರಾರಂಭವಾಗಲಿವೆ.

ಮೇ.2ರಂದು ಜ.ಫಕೀರ ಸಿದ್ದರಾಮ ಸ್ವಾಮೀಜಿಗಳ ಹೊರ ಪಯಣ ಉತ್ಸವ ಹರಿಪುರಕ್ಕೆ ದಯ ಮಾಡಿಸುವದು ಮತ್ತು ಸಾಯಂಕಾಲ 5 ಗಂಟೆಗೆ ಕಳಸಾರೋಹಣ, ಮೇ. 7 ಮತ್ತು 8ರಂದು ಲಕ್ಷ್ಮೇಶ್ವರದಲ್ಲಿ ಭಿಕ್ಷೆ, ಮೇ. 9ರಂದು ಬೆಳಿಗ್ಗೆ 11 ಗಂಟೆಗೆ ಕೋಳಿವಾಡ ದ್ಯಾಮವ್ವ ದೇವಿಗೆ ಉಡಿ ತುಂಬುವ ಕಾರ್ಯಕ್ರಮ ಮತ್ತು ಸಂಜೆ 5 ಗಂಟೆಗೆ ಲಕ್ಷ್ಮೀ ಪೂಜೆ ನೆರವೇರುವುದು.

ಮೇ. 11ರಂದು ಹರಿಪೂರದಲ್ಲಿ ಭಿಕ್ಷೆ, ಮೇ. 12ರಂದು ಹರಿಪೂರದಿಂದ ಶಿರಹಟ್ಟಿಗೆ ಬಂದು ಮ್ಯಾಗೇರಿ ಪಾದಗಟ್ಟಿಯಿಂದ ಉತ್ಸವದ ಮುಖಾಂತರ ಶ್ರೀಮಠಕ್ಕೆ ಬಂದು ಉಚ್ಚಾಯ ಎಳೆಯುವದು, ಅಲ್ಲಿಂದ ಸದರಿಗೆ ಬಂದು ದರ್ಬಾರ ನಡೆಸುವದು, ಸಂಜೆ 5 ಗಂಟೆಗೆ ಮೆರವಣಿಗೆ ಮುಖಾಂತರ ಶೆಟ್ಟರ ಮನೆಯಿಂದ ಬಂದು ಶ್ರೀಮಠದ ರಥೋತ್ಸವಕ್ಕೆ ಚಾಲನೆ ನೀಡಲಾಗುವುದು.

ನಂತರ ಧರ್ಮಸಭೆ, ಮೇ. 13ರಂದು ಬೆಳಿಗ್ಗೆ 10ಗಂಟೆಯಿಂದ ಗುಡಾರ ಬಿನ್ನಾಯ, ಮೇಣಿಯಲ್ಲಿ ಉತ್ಸವದೊಂದಿಗೆ ಸಂಜೆ 5 ಗಂಟೆಗೆ ಕಡುಬಿನ ಕಾಳಗ, ಮೇ. 14ರಂದು ಬೆಳಿಗ್ಗೆ 11 ಗಂಟೆಗೆ ಸಂಗೀತ ಕಚೇರಿ, ಕಲಾವಿದರಿಗೆ ಸನ್ಮಾನ, ಮೇ. 17ರಂದು ಕಳಸ ಇಳಿಸುವುದು, ಮಧ್ಯಾಹ್ನ 12 ಗಂಟೆಗೆ ಜಂಗಮ ಗಣಾರಾಧನೆ ಹಾಗೂ ರಾತ್ರಿ 9 ಗಂಟೆಗೆ ಜ.ಫ. ಸಿದ್ದರಾಮ ಸ್ವಾಮೀಜಿ ಫಕೀರರ ವೇಷದಲ್ಲಿ ನಗಾರಿಖಾನೆಗೆ ದಯ ಮಾಡಿಸುವುದು, ಕುರಾನ್ ಪಠಣ, ಪೀರಾಗಳಿಗೆ ದಾನ ಕೊಡುವದು, ಮೇ. 27ರಂದು ಮುಂಜಾನೆ 11 ಗಂಟೆಗೆ ತೇರಿನ ಗಡ್ಡಿ ಒಳ ಹಾಕುವುದು, ನಂತರ ಮಹಾಪ್ರಸಾದ ಕಾರ್ಯಕ್ರಮಗಳು ನಡೆಯಲಿವೆ ಎಂದು ಟ್ರಸ್ಟ್ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

## ಅಡ್ಡಪಲ್ಲಕ್ಕಿ ಮಹೋತ್ಸವ, ಧರ್ಮ ಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಸಂತೃಪ್ತಿ, ಸಮೃದ್ಧಿಗಾಗಿ ಧರ್ಮಾಚರಣೆ ಬೇಕು

■ವಿಜಯಸಾಕ್ಷಿ ಸುದ್ದಿ, ನ್ಯಾಮತಿ



ಸುಖ-ಶಾಂತಿಯ ಬದುಕಿಗೆ ಆದರ್ಶ ಮೌಲ್ಯಗಳ ಪರಿಪಾಲನೆ ಮುಖ್ಯ. ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಸಂದರ್ಭದಲ್ಲಿ ಅರಿವು ಮೂಡಿಸಬೇಕಾದುದು ಅವಶ್ಯಕ. ಸಂತೃಪ್ತ ಬದುಕಿಗಾಗಿ, ಸಮೃದ್ಧ ಜೀವನಕ್ಕಾಗಿ ನಿಜವಾದ ಧರ್ಮಾಚರಣೆಯ ಅಗತ್ಯವಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ದೊಡ್ಡೆತ್ತಿನಹಳ್ಳಿ ಗ್ರಾಮದಲ್ಲಿ ಶ್ರೀ ಭದ್ರಕಾಳಿ ಸಮೇತ ಶ್ರೀ ವೀರಭದ್ರಸ್ವಾಮಿ ಮೊದಲ್ಗೊಂಡು ಹಲವಾರು ಪರಿವಾರ ದೇವತೆಗಳ ಪ್ರತಿಷ್ಠಾಪನಾ ಅಂಗವಾಗಿ ಜರುಗಿದ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭೌತಿಕ ಜೀವನ ಸಮೃದ್ಧಗೊಂಡಂತೆ ಆಂತರಿಕ ಜೀವನ ಪರಿಶುದ್ಧಗೊಳ್ಳಬೇಕಾಗಿದೆ. ಸುಖದ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮ ಪ್ರಜ್ಞೆ ಮತ್ತು ಸದಾಚಾರ ಸಂಸ್ಕೃತಿ ಬೆಳೆದುಕೊಂಡು ಬರಬೇಕಾಗಿದೆ. ಬೆಳಕಿನಲ್ಲಿ ಬೆಳಕಿಗೆ ಬೆಲೆಯಿಲ್ಲದೇ ಇರಬಹುದು. ಆದರೆ ಕತ್ತಲೆಯಲ್ಲಿ ಕಿರು ದೀಪಕ್ಕೂ ಹಿರಿದಾದ ಬೆಲೆಯುಂಟು. ನೀತಿ ನಿಯಮಗಳಿಲ್ಲದೇ ಸಮಾಜ, ನಾಡು ಬೆಳೆಯಲಾಗದು. ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸಿದ ವೀರಶೈವ ಧರ್ಮ ಸರ್ವರ ಬಾಳಿಗೆ ಆಧ್ಯಾತ್ಮ ದಾರಿ ತೋರಿ ಉಜ್ವಲ ಜೀವನಕ್ಕೆ ಸ್ಫೂರ್ತಿಯಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸಾದಿ ಧ್ಯಾನ ಪರ್ಯಂತರವಾದ ದಶಧರ್ಮ ಸೂತ್ರಗಳು ಸಕಲರ ಬದುಕಿಗೆ ದಿಕ್ಸೂಚಿಯಾಗಿವೆ. ದೊಡ್ಡೆತ್ತಿನಹಳ್ಳಿ ಗ್ರಾಮದಲ್ಲಿ ಭವ್ಯ ಸುಂದರ ಶ್ರೀ ವೀರಭದ್ರೇಶ್ವರ ಮೊದಲ್ಗೊಂಡು ಅನೇಕ ದೇವಾಲಯಗಳನ್ನು ನಿರ್ಮಿಸಿ ಲೋಕಾರ್ಪಣೆ ಮಾಡುತ್ತಿರುವ ತಮ್ಮೆಲ್ಲರ ಧರ್ಮ ನಿಷ್ಠೆ ಶ್ರದ್ಧಾ ಮನೋಭಾವ ಕಂಡು ಅತ್ಯಂತ ಸಂತೋಷವಾಗಿದೆ ಎಂದರು.

ನೇತೃತ್ವ ವಹಿಸಿದ ಹೊನ್ನಾಳಿ ಹಿರೇಕಲ್ಮಠದ ಡಾ. ಒಡೆಯರ್ ಚೆನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ನಾಗರೀಕತೆಯ ಹೆಸರಿನಲ್ಲಿ ಸಂಸ್ಕೃತಿ ನಾಶಗೊಳ್ಳಬಾರದು. ಧರ್ಮ ಮತ್ತು ಧರ್ಮಾಚರಣೆ ಮರೆತರೆ ಅಪಾಯ ತಪ್ಪಿದ್ದಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜೀವನ ದರ್ಶನದ ಅಮೂಲ್ಯ ಸಂದೇಶ ಸರ್ವರ ಬಾಳಿಗೆ ದಾರಿದೀಪವೆಂದರು.

ರಾಂಪುರ ಹಾಲಸ್ವಾಮಿ ಮಠದ ಶಿವಕುಮಾರ ಸ್ವಾಮಿಗಳು, ಗೋವಿನಕೋವಿ ವಿಶ್ವಾರಾಧ್ಯ ಮಹಲಿಂಗ ಹಾಲಸ್ವಾಮಿಗಳು, ಹೊಟ್ಯಾಪುರ ಓಂಕಾರಸ್ವಾಮಿ ಉಪಸ್ಥಿತರಿದ್ದರು. ನ್ಯಾಮತಿ ಕೋಹಳ್ಳಿ ಹಿರೇಮಠದ ಎಸ್.ಕೆ. ವಿಶ್ವಾರಾಧ್ಯರು, ನ್ಯಾಮತಿ ಬಸವರಾಜ ಹೊಸಕಟ್ಟೆ, ಗ್ರಾಮದ ಎಲ್ಲ ಕುಲ ದೈವದ ಪ್ರಮುಖರು ಪಾಲ್ಗೊಂಡಿದ್ದರು.

ಸಮಾರಂಭಕ್ಕೂ ಮುನ್ನ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಸಂಭ್ರಮದಿಂದ ಜರುಗಿತು.

## ಶ್ರೀ ಏಳು ಮಕ್ಕಳ ತಾಯಿ ದೇವಸ್ಥಾನದ ನೂತನ ಗೋಪುರದ ಕಳಸಾರೋಹಣ

# ಜಾತ್ರಾ ಸಮಾರಂಭ ಎ.28, 29ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಶ್ರೀ ಏಳು ಮಕ್ಕಳ ತಾಯಿ ದೇವಸ್ಥಾನದ ನೂತನ ಗೋಪುರದ ಕಳಸಾರೋಹಣ, ದೇವಸ್ಥಾನದ ಜಾತ್ರಾ ಸಮಾರಂಭ ಮತ್ತು ಶ್ರೀ ಡೋಹಡಿ ಕಕ್ಕಯ್ಯನವರ ಜಯಂತ್ಯುತ್ಸವ ಎ.28 ಮತ್ತು 29ರಂದು ನಡೆಯಲಿದೆ ಎಂದು ದೇವಸ್ಥಾನದ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಪೂರ್ಣಾಜೆಪ್ಪ ಖರಾಟೆ ತಿಳಿಸಿದರು.

ಅವರು ಶುಕ್ರವಾರ ಕರೆದಿದ್ದ ಭಕ್ತರ ಪೂರ್ವಭಾವಿ ಸಭೆಯಲ್ಲಿ ಮಾಹಿತಿ ನೀಡಿ, 35 ವರ್ಷಗಳಿಂದ ದೇವಿಯ ಜಾತ್ರಾ ಮಹೋತ್ಸವ ನಡೆಸುತ್ತಾ ಬರಲಾಗಿದೆ. ಈ ಬಾರಿ ಜಾತ್ರೆಯನ್ನು ವಿಜೃಂಭಣೆಯಿಂದ ನಡೆಸಲು ಸಮಾಜ ಬಾಂಧವರು ಮುಂದಾಗಿದ್ದು, ಸಮಾಜದ ಹೆಣ್ಣು ಮಕ್ಕಳೆಲ್ಲರನ್ನೂ ತವರು ಮನೆಗೆ ಕರೆಯಿಸಿ ಅತ್ತೆ ಸೊಸೆಯಂದಿರಿಗೆ ಉಡಿ ತುಂಬುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಸೋಮವಾರ ದೇವಸ್ಥಾನದ ನೂತನ ಗೋಪುರದ ಕಳಸಾರೋಹಣದ ನಿಮಿತ್ತ ಬೆಳಿಗ್ಗೆ 9ರಿಂದ ಶ್ರೀ ಪೇಟೆ ಆಂಜನೇಯ ದೇವಸ್ಥಾನದ ಕಳಸದಿಂದ ಕಳಸದ ಮೆರವಣಿಗೆ, ಲಕ್ಷ್ಮೇಶ್ವರ ಕರೇವಾಡಿಮಠದ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರ ಅಮೃತ ಹಸ್ತದಿಂದ ಕಳಸಾರೋಹಣ ನೆರವೇರುವುದು. ಸಂಜೆ 4ಕ್ಕೆ ರಂಗೋಲಿ ಸ್ಪರ್ಧೆ, ಸಂಜೆ 6ಕ್ಕೆ ಮನರಂಜನೆ ಕಾರ್ಯಕ್ರಮ ನಡೆಯಲಿದೆ. ಎಪ್ರಿಲ್ 29, ಮಂಗಳವಾರ ಬೆಳಿಗ್ಗೆ 7ಕ್ಕೆ ಶ್ರೀ ಏಳು ಮಕ್ಕಳ ತಾಯಿಗೆ ರುದ್ರಾಭಿಷೇಕ, ಬೆಳಿಗ್ಗೆ 11ಕ್ಕೆ ಸಭಾ ಕಾರ್ಯಕ್ರಮ ನಡೆಯಲಿದೆ. ಹುಬ್ಬಳ್ಳಿ ಮೂರುಸಾವಿರ ಮಠದ ಶ್ರೀ ಡಾ. ಗುರುಸಿದ್ದ ರಾಜಯೋಗೀಂದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಬೀರವಳ್ಳಿ ಗುರುದೇವ ತಪೋವನದ ಪೀಠಾಧ್ಯಕ್ಷೆ ಗುರು ಮಾತಾಜಿ ನಂದಾತಾಯಿ ಉಪಸ್ಥಿತರಿರುವರು. ಸಂಸದ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟಿಸುವರು. ಪೂರ್ಣಾಜೆಪ್ಪ ಖರಾಟೆ ಅಧ್ಯಕ್ಷತೆ ವಹಿಸುವರು. ಶಾಸಕ ಡಾ. ಚಂದ್ರು ಲಮಾಣಿ ಸೇರಿದಂತೆ ಸಮಾಜದ ಮುಖಂಡರು ಭಾಗವಹಿಸಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಾಗೂ ಸಮಾಜದ ರಾಜ್ಯ ಪದಾಧಿಕಾರಿಗಳಿಗೆ ಸನ್ಮಾನ ನಡೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎನ್.ಆರ್. ಸಾತಪುತೆ, ಸತೀಶ ನಾರಾಯಣಕರ, ಲಕ್ಷ್ಮೀಕಾಂತ ಕರಾಟೆ, ಕಪ್ಪದಸ್ವಾಮಿ ಕರಾಟೆ, ಮಂಜುನಾಥ ಗಜಾಕೋಶ, ರಾಜು ಕರಾಟೆ, ಮಂಜುನಾಥ ಗಜಾಕೋಶ, ಕಿರಣ ಕರಾಟೆ ಮುಂತಾದವರಿದ್ದರು.

# ಅಲ್ಲಮಪ್ರಭುದೇವರ ಮಠದ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಲಿಂಗೈಕ್ಯ ಬಸವರಾಜೇಂದ್ರ ಮಹಾಸ್ವಾಮಿಗಳ 13ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಇಲ್ಲಿಯ ಅಲ್ಲಮಪ್ರಭುದೇವರ ಮಠದ ರಥೋತ್ಸವವು ಶುಕ್ರವಾರ ಸಂಜೆ ಸಂಭ್ರಮದಿಂದ ನೆರವೇರಿತು.

ಶ್ರೀಮಠದ ಸಿದ್ಧಲಿಂಗೇಶ್ವರ ಸ್ವಾಮೀಜಿ, ಹೊಸರಿತ್ತಿಯ ಗುದ್ದಲೀಶ್ವರ ಸ್ವಾಮೀಜಿ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಪೂಜೆ ಸಲ್ಲಿಸಿ ರಥೋತ್ಸವಕ್ಕೆ ಚಾಲನೆ ನೀಡಿದರು. ಡೊಳ್ಳು ಮೇಳ ಹಾಗೂ ಜಾಂಜ್ ಮೇಳ ಸೇರಿದಂತೆ ವಿವಿಧ ಜಾನಪದ ವಾದ್ಯಗಳು ರಥೋತ್ಸವದಲ್ಲಿ ಭಾಗವಹಿಸಿದ್ದವು. ಶ್ರೀಮಠದಿಂದ ಚೌಕಿಮಠದವರೆಗೂ ರಥವು ಸಾಗಿತು.

ಇದಕ್ಕೂ ಪೂರ್ವ ಬೆಳಿಗ್ಗೆ ಬಸವರಾಜೇಂದ್ರ ಮಹಾಸ್ವಾಮಿಗಳ ಗದ್ದುಗೆಗೆ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ಜರುಗಿದವು. ನಂತರ ಸಾಮೂಹಿಕ ವಿವಾಹ, ಅನ್ನ ಸಂತರ್ಪಣೆ ನೆರವೇರಿತು.

# ಮಸೀದಿ ನಿರ್ಮಾಣಕ್ಕೆ ಅವಕಾಶ ನೀಡದಂತೆ ಅರ್ಜಿ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಖಾನತೋಟ ಓಣಿಯ ಕನಸಾವಲಿ ದರ್ಗಾ ಪಕ್ಕದಲ್ಲಿ ಮಸೀದಿ ಕಟ್ಟಡಕ್ಕೆ ಅವಕಾಶ ನೀಡಬಾರದೆಂದು ಗದಗ ಬೆಟಗೇರಿ ನಗರಸಭೆಯ ಪೌರಾಯುಕ್ತರಿಗೆ ಖಾನತೋಟ ಸಾರ್ವಜನಿಕರು ತಕರಾರು ಅರ್ಜಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕ್ರಾಂತಿ ಸೇನಾದ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಮಾತನಾಡಿ, ಖಾನತೋಟ ಓಣಿಯ ಹಿಂದೂ-ಮುಸ್ಲಿಂ ಸಮಾಜದವರು ಪೂಜಿಸುವ, ಭಾವೈತೆಯ ಸಂಕೇತವಾಗಿರುವ ಕನಸಾವಲಿ ದರ್ಗಾ ಪಕ್ಕದಲ್ಲಿ ಯಾವುದೇ ಕಾರಣಕ್ಕೂ ಮಸೀದಿ ಕಟ್ಟಡಕ್ಕೆ ಅವಕಾಶ ಕೊಡಬಾರದು. ದರ್ಗಾಕ್ಕೆ ಎಂದು ಹಿಂದೂಗಳು ದಾನ ನೀಡಿರುವ ಜಾಗದಲ್ಲಿ ಮಸೀದಿ ಕಟ್ಟುತ್ತಿರುವುದು ಖಂಡನೀಯ. ತಕ್ಷಣವೇ ಕಾಮಗಾರಿ ನಿಲ್ಲಿಸಬೇಕು ಹಾಗೂ ಮಸೀದಿ ನಿರ್ಮಾಣಕ್ಕೆ ಅವಕಾಶ ಕೊಡಬಾರದೆಂದು ಮನವಿ ಸಲ್ಲಿಸಿದರು.

# 'ಮನೋರಮಾ ಪ್ರೀಮಿಯರ್ ಲೀಗ್'

■ವಿಜಯಸಾಕ್ಷಿ ಸುದ್ದಿ, ಗದಗ




ಇತ್ತೀಚೆಗೆ ನಗರದ ಮನೋರಮಾ ಕಾಲೇಜಿನ ಬಿಕಾಂ, ಬಿಸಿಎ, ಬಿಬಿಎ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಕಾಲೇಜು ದೈಹಿಕ ನಿರ್ದೇಶಕರಾದ ಖಯೂಮ ನವಲೂರ ಅವರ ಮಾರ್ಗದರ್ಶನದಲ್ಲಿ 'ಮನೋರಮಾ ಪ್ರೀಮಿಯರ್ ಲೀಗ್' ಕ್ರಿಕೆಟ್ ಆಯೋಜಿಸಲಾಗಿತ್ತು.

ಉದ್ಘಾಟಕರಾಗಿ ಸಂಸ್ಥೆಯ ಚೇರಮನ್ ಎನ್.ಎಮ್. ಕುಡುತರಕರ ಆಗಮಿಸಿದ್ದರು. ಸಂಸ್ಥೆಯ ಕಾರ್ಯದರ್ಶಿಗಳು ಹಾಗೂ ಕ್ರೀಡಾಪಟುಗಳಾದ ಮಂಜುನಾಥ ಕುಡತರಕರ ಎಲ್ಲ ಕ್ರೀಡಾಪಟುಗಳಿಗೆ ಅಭಿನಂದಿಸಿ ಮಾತನಾಡಿ, ಕ್ರೀಡೆಯಲ್ಲಿ ಸೋಲು-ಗೆಲುವು ಸಹಜ. ಆದರೆ ಪ್ರಾಮಾಣಿಕತೆ, ಬದ್ಧತೆಯಿಂದ ಆಟ ಆಡಿ ಎಂದು ಪ್ರೋತ್ಸಾಹಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಎಸ್. ಹೀರೆಮಠ ವಿಜೇತ ತಂಡಗಳಿಗೆ ಬಹುಮಾನ ಹಾಗೂ ಟ್ರೋಫಿಗಳನ್ನು ನೀಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಚೇತನ್ ಕುಡತರಕರ, ಸಂಜಯ್ ಕುಡತರಕರ ಉಪಸ್ಥಿತರಿದ್ದರು. ನಿರ್ಣಾಯಕರಾಗಿ ಆದಿತ್ಯಾ ಜೋಶಿ, ಕಾಲೇಜಿನ ಸಂಯೋಜಕರಾದ ಪ್ರೊ. ಸವಿತಾ ಪೂಜಾರ, ಪ್ರೊ. ಅಲ್ವಿನಾ ಡಿ., ಪ್ರೊ. ಚೈತ್ರಾ ಡಿ, ಪ್ರೊ. ಶಾಹೀದಾ ಶಿರಹಟ್ಟಿ ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ನೂತನ ಕಟ್ಟಡದ ಭೂಮಿಪೂಜೆ ನಾಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಸುಕ್ಷೇತ್ರ ಮಾಢಳ್ಳಿ ಗ್ರಾಮದಲ್ಲಿ ಎ.27ರ ಸಂಜೆ 4.30ಕ್ಕೆ ಶ್ರೀ ಸದ್ಗುರು ಶ್ರೀ ಸಿದ್ಧಾರೂಢ ಮಹಾಸ್ವಾಮಿಗಳ ನೂತನ ಮಠದ ಕಟ್ಟಡದ ಭೂಮಿಪೂಜಾ ಅಡಿಗಲ್ಲು ಸಮಾರಂಭ ಕಾರ್ಯಕ್ರಮ ಅಣ್ಣಿಗೇರಿ ದಾಸೋಹಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಹಾಗೂ ವರವಿ ಮೌನೇಶ್ವರಮಠದ ಶ್ರೀ ಮೌನೇಶ್ವರ ಸ್ವಾಮಿಗಳ ಸಾನ್ನಿಧ್ಯದಲ್ಲಿ ಜರುಗಲಿದೆ.

ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ಎಸ್.ವಿ. ಸಂಕನೂರ, ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಹೆಚ್.ಪಾಟೀಲ, ಗ್ರಾ.ಪಂ ಅಧ್ಯಕ್ಷ ಹನಮರಡ್ಡಿ ಹೊಂಬಳ, ಮುಳಗುಂದ ಪ.ಪಂ ಸದಸ್ಯ ಷಣ್ಮುಖಪ್ಪ ಬಡ್ಡಿ, ಗುರುನಾಥ ಕುರ್ತಕೋಟಿ ಸೇರಿದಂತೆ ಟ್ರಸ್ಟ್ ಕಮಿಟಿಯವರು, ಗ್ರಾಮದ ಗುರು-ಹಿರಿಯರು ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

### ದೈಹಿಕ ನ್ಯೂನತೆಗೆ ಸವಾಲೆಸೆದು ಸಾಮಾನ್ಯರಂತೆ ನರೇಗಾ ಕಾಮಗಾರಿಯಲ್ಲಿ ದುಡಿಯುತ್ತಿರುವ ವಿಶೇಷ ಚೇತನರು

# ವಿಶೇಷಚೇತನರ ಜೀವನಕ್ಕೆ ನರೇಗಾ ಆಸರೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರಕ್ತ ಸಂಬಂಧಿಕರಲ್ಲಿ ಮದುವೆಯಾದ ಕಾರಣದಿಂದಲೋ ಅಥವಾ ಇನ್ನಾವುದೋ ಕಾರಣದಿಂದಲೋ ದೈಹಿಕವಾಗಿ ನ್ಯೂನತೆ ಹೊಂದಿರುವವರು ಸಮಾಜದಲ್ಲಿ ಸಾಮಾನ್ಯರಂತೆ ಜೀವನ ನಡೆಸುವುದು ಕಷ್ಟ. ದೈಹಿಕವಾಗಿ ನ್ಯೂನತೆ ಹೊಂದಿರುವವರನ್ನು ಕರೆದು ಕೆಲಸ ಕೊಡುವುದಕ್ಕಿಂತ ಅವರಿಂದ ಏನು ಕೆಲಸ ಮಾಡಲು ಸಾಧ್ಯ ಎಂಬ ಪ್ರಶ್ನೆಗಳನ್ನು ಕೇಳುವವರೇ ಹೆಚ್ಚು. ಹೀಗಿರುವಾಗ ದೈಹಿಕವಾಗಿ ಮತ್ತು ಮಾನಸಿಕವಾಗಿ ನ್ಯೂನತೆ ಹೊಂದಿರುವವರು ಗಜೇಂದ್ರಗಡ ತಾಲೂಕಿನಲ್ಲಿ ಶುರುವಾಗಿರುವ ನರೇಗಾ ಸಮುದಾಯ ಕಾಮಗಾರಿಗಳಲ್ಲಿ ಸಮಾನ್ಯರಂತೆ ಕೆಲಸ ಮಾಡುವುದರ ಮೂಲಕ ತಮ್ಮ ದೈಹಿಕ ನ್ಯೂನತೆಗೆ ಸವಾಲೆಸದಿದ್ದಾರೆ.



ತಾಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಇದ್ದೂರಲ್ಲೇ ಕೆಲಸ ದೊರೆಯಲಿ ಎಂದು ನರೇಗಾ ಸಮುದಾಯ ಕಾಮಗಾರಿಗಳಲ್ಲಿ ಕೆಲಸ ಆರಂಭವಾಗಿದೆ. ಗಂಡು-ಹೆಣ್ಣಿಗೆ ಸರಿಸಮಾನವಾಗಿ ಕೂಲಿಮೊತ್ತ ನೀಡುವ ನರೇಗಾ ಯೋಜನೆಯು ವಿಶೇಷ ಚೇತನರಿಗೆ ಮತ್ತು ಅಂಗವಿಕಲರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯತಿ ನೀಡುವುದರ ಮೂಲಕ ಅವರ ಸ್ವಾವಲಂಬನೆ ಜೀವನಕ್ಕೆ ಮುತುವರ್ಜಿ ವಹಿಸಿದೆ.

ತಾಲೂಕಿನ ಗುಳಗುಳಿ ಗ್ರಾ.ಪಂ ವ್ಯಾಪ್ತಿಯ ಹಿರೇಅಳಗುಂಡಿ ಗ್ರಾಮದ 24 ವರ್ಷದ ಸುಮ್ಮವ್ವ ಬಾಲನ್ನವರ ಮತ್ತು 22 ವರ್ಷದ ಬಸವ್ವ ಬಾಲನ್ನವರ ಎಂಬ ಬುದ್ಧಿಮಾಂದ್ಯ ಸಹೋದರಿಯರಿಬ್ಬರಿಗೆ ನರೇಗಾ ಸಮುದಾಯ ಕೆಲಸ ಜೀವನ ಕಟ್ಟಿಕೊಟ್ಟಿದೆ. ಸರಿಯಾಗಿ ಮಾತು ಬರದ ಮತ್ತು ದೈಹಿಕವಾಗಿ ನ್ಯೂನತೆ ಹೊಂದಿರುವ ಈ ಇಬ್ಬರು ಬುದ್ಧಿಮಾಂದ್ಯ ಸಹೋದರಿಯರು ಪಾಲಕರ ನೆರವಿನಿಂದ ಕೆಲಸ ಮಾಡುತ್ತಿದ್ದಾರೆ.

> ನರೇಗಾ ಯೋಜನೆಯಲ್ಲಿ ವಿಶೇಷ ಚೇತನರಿಗೆ, ಹಿರಿಯ ನಾಗರೀಕರಿಗೆ, ಅಂಗವಿಕಲರಿಗೆ ರಿಯಾಯತಿ ಕೆಲಸ ನೀಡಲಾಗುವುದು. ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ವಿಶೇಷ ಚೇತನರಿಗೆ ಇರುವ ಕೆಲಸದ ರಿಯಾಯತಿ ಬಗ್ಗೆ ಐಇಸಿ ಚಟುವಟಿಕೆ ಮೂಲಕ ಪ್ರಚಾರ ಮಾಡಲಾಗಿದೆ. ಹೀಗಾಗಿ ಪ್ರತಿಯೊಂದು ಗ್ರಾಮ ಪಂಚಾಯತಿಗಳಲ್ಲಿ ವಿಶೇಷ ಚೇತನರು ನರೇಗಾ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳುತ್ತಿದ್ದಾರೆ.
>
> **– ಮಂಜುಳಾ ಹಕಾರಿ.**
> ಕಾರ್ಯನಿರ್ವಾಹಕ ಅಧಿಕಾರಿಗಳು,
> ತಾ.ಪಂ, ಗಜೇಂದ್ರಗಡ.

> ದೈಹಿಕ ನ್ಯೂನತೆ ಹೊಂದಿದ್ದರೂ ಯೋಜನೆಯಡಿ ಕೆಲಸ ಮಾಡುವ ಆಸಕ್ತಿ ಈ ನಾಲ್ವರಿಗೆ ಬಂದಿರುವುದು ಒಳ್ಳೆಯದು. ಇವರಷ್ಟೇ ಅಲ್ಲದೆ ಬೇರೆ ಯಾರಾದರೂ ವಿಶೇಷ ಚೇತನರು ತಾಲೂಕಿನ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿದ್ದರೆ ಅವರು ಕೂಡಾ ನರೇಗಾ ಕೆಲಸಕ್ಕೆ ಬರಬಹುದು. ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಬೇಸಿಗೆ ಅವಧಿಯಲ್ಲಿ ಸಮುದಾಯ ಕೆಲಸದಲ್ಲಿ ಭಾಗವಹಿಸಿ.
>
> **– ಬಸವರಾಜ ಬಡಿಗೇರ.**
> ಸಹಾಯಕ ನಿರ್ದೇಶಕರು(ಗ್ರಾ.ಉ),
> ತಾ.ಪಂ ಗಜೇಂದ್ರಗಡ.

ತಂದೆ ರಂಗಪ್ಪ ಬಾಲನ್ನವರ ಯೋಜನೆಯಡಿ ಬದು ನಿರ್ಮಾಣ ಕೆಲಸದಲ್ಲಿ ಅಗೆಯುವ ಮಣ್ಣನ್ನು ಬುದ್ಧಿಮಾಂಧ್ಯ ಸಹೋದರಿಯರು ಪರಸ್ಪರ ಸಹಕಾರದಿಂದ ಮಣ್ಣನ್ನು ಬುಟ್ಟಿಗೆ ತುಂಬಿ ಹೊಲದ ಬದುವಿಗೆ ಒಡ್ಡು ಹಾಕುವ ಕೆಲಸ ಮಾಡುತ್ತಾರೆ. ತಾಯಿ ಲಲಿತವ್ವ ಬಾಲನ್ನವರ ಮನೆಕೆಲಸ ಮಾಡಿಕೊಂಡು ಇಬ್ಬರು ಮಕ್ಕಳನ್ನು ಸಾಕುತ್ತಿದ್ದಾಳೆ. ಬಡ ಕುಟುಂಬದಲ್ಲಿರುವ ಬಾಲನ್ನವರ ದಂಪತಿಗಳಿಗೆ ನರೇಗಾ ಕೆಲಸವೇ ಜೀವನಕ್ಕೆ ಆಧಾರ.

ತಾಲೂಕಿನ ಗೋಗೇರಿ ಗ್ರಾ.ಪಂ ವ್ಯಾಪ್ತಿಯ 45 ವರ್ಷದ ಬಸಮ್ಮ ಕೆರಿ ಬುದ್ಧಿಮಾಂದ್ಯಳಾಗಿದ್ದರೆ, 38 ವರ್ಷದ ಅಂದಪ್ಪ ಕೆರಿ ಕಾಲನ್ನು ಕಳೆದುಕೊಂಡಿದ್ದಾನೆ. ಇಬ್ಬರೂ ಬೇಸಿಗೆ ಅವಧಿಯಲ್ಲಿ ಕನಿಷ್ಠ 60 ದಿನಗಳ ಕಾಲ ದುಡಿದರೆ 22 ಸಾವಿರ ರೂ ಕೂಲಿ ಮೊತ್ತ ಬರುವ ಕಾರಣದಿಂದ ದೈಹಿಕ ನ್ಯೂನತೆ ಹೊಂದಿದ್ದರೂ ನರೇಗಾದ ಸಮುದಾಯ ಕೆಲಸದಲ್ಲಿ ದುಡಿದು ಸ್ವಾವಲಂಬಿಯಾಗಿ ಬದುಕು ಕಟ್ಟಿಕೊಂಡಿದ್ದಾರೆ.

### ಗ್ರಾಮೀಣ ಭಾಗದಲ್ಲಿ ಅನಧಿಕೃತ ಮದ್ಯ ಮಾರಾಟ ಜೋರು

# ಮಹಿಳೆಯರ ಗೃಹಲಕ್ಷ್ಮೀ ಹಣಕ್ಕೂ ಕುತ್ತು

■ವಿಜಯಸಾಕ್ಷಿ ಸುದ್ದಿ, ಡಂಬಳ

ಅಧಿಕಾರಿಗಳ ಭಯ-ಭೀತಿ ಇಲ್ಲದೆ ಅನಧಿಕೃತವಾಗಿ ಮದ್ಯ ಮಾರಾಟ ಅವ್ಯಾಹತವಾಗಿ ನಡೆದಿದ್ದು, ಮದ್ಯ ವ್ಯಸನಿಗಳು ತಂಡ ತಂಡವಾಗಿ ಮದ್ಯ ಸೇವಿಸಿ ಚರಂಡಿ, ರಸ್ತೆ ಬದಿಯ ಮುಳ್ಳುಕಂಟಿಗಳಲ್ಲಿ ಬೀಳುವುದು ಸಾಮಾನ್ಯವಾಗಿದೆ.

ಅಬಕಾರಿ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ನಿರ್ಲಕ್ಷ್ಯದಿಂದಾಗಿ ಡಂಬಳ ಗ್ರಾಮದಲ್ಲಿ ಅನಧಿಕೃತ ಮದ್ಯ ಮಾರಾಟದ ಅಡ್ಡೆಗಳು ಓಣಿ ಓಣಿಗಳಲ್ಲಿ ಸೃಷ್ಟಿಯಾಗಿದ್ದಾರೆ. ಡಂಬಳ ಬಸ್ ನಿಲ್ದಾಣ, ಮುಖ್ಯ ಬಜಾರ, ಜನತಾ ಪ್ಲಾಟ್, ಅಂಬೇಡ್ಕರ್ ಕಾಲೋನಿ, ಚವಡಿ, ಸ್ಮಶಾನಕ್ಕೆ ಹೋಗುವ ದಾರಿ ಹತ್ತಿರ ಸೇರಿದಂತೆ ಕುಡುಕರಿಗೆ ಬೇಕಾದಂತೆ ಮದ್ಯ ಮಾರಾಟ ನಡೆಯುತ್ತಿದೆ ಎಂಬ ದೂರುಗಳು ಕೇಳಿಬರುತ್ತಿವೆ.



> ಈಗಾಗಲೇ ಮುಂಡರಗಿ ತಾಲೂಕಿನಾದ್ಯಂತ ಅಕ್ರಮ ಮದ್ಯ ಮಾರಾಟಗಾರರ ಮೇಲೆ ಕೇಸ್ ದಾಖಲಿಸಿದ್ದು, ಪ್ರತಿ ಹಳ್ಳಿಗಳಿಗೆ ಭೇಟಿ ನೀಡಿ ಅಕ್ರಮ ಮದ್ಯ ಮಾರಾಟಗಾರರ ವಿರುದ್ಧ ಸೂಕ್ತ ಕ್ರಮಕ್ಕೆ ಮುಂದಾಗುತ್ತೇವೆ.
>
> **– ಸುವರ್ಣಾ.**
> ಅಬಕಾರಿ ಅಧಿಕಾರಿ, ಮುಂಡರಗಿ.

ಮದ್ಯ ಮಾರಾಟಕ್ಕಾಗಿ ಅಬಕಾರಿ ಇಲಾಖೆ ರೂಪಿಸಿರುವ ಕಾನೂನುಗಳನ್ನು ಗಾಳಿಗೆ ತೂರಿ ಮದ್ಯ ಮಾರಾಟ ಮಾಡಲಾಗುತ್ತಿದೆ.

ಹೋಬಳಿಯ ಪ್ರತಿ ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟದಿಂದ ಈ ಗ್ರಾಮಗಳ ಬಡ ಕುಟುಂಬದ ಮಹಿಳೆಯರ ಮಾಂಗಲ್ಯ, ಕಿವಿಯೋಲೆ, ಮನೆಯಲ್ಲಿನ ಪಾತ್ರೆಗಳೂ ಬಿಕರಿಯಾಗಿದ್ದಲ್ಲದೆ, ಕೆಲ ಮದ್ಯ ವ್ಯಸನಿಗಳು ಸರ್ಕಾರ ನೀಡಿದ ಗೃಹಲಕ್ಷ್ಮೀ ಹಣಕ್ಕೆ ಕೈ ಹಾಕಿದ್ದಾರೆ, ಹಣ ಕೊಡಲು ನಿರಾಕರಿಸಿದರೆ ಮಹಿಳೆಯರ ಮೇಲೆ ಹಲ್ಲೆಗೆ ಮುಂದಾಗುತ್ತಿದ್ದಾರೆ ಎಂಬ ಅಳಲುಗಳು ಕೇಳತೊಡಗಿವೆ.

ಈ ಬಗ್ಗೆ ಸಾಮಾಜಿಕ ಹೋರಾಟಗಾರ ಗೋಣಿಬಸಪ್ಪ ಎಸ್.ಕೊರ್ಲಹಳ್ಳಿ ಪ್ರತಿಕ್ರಿಯಿಸಿ, ಮುಂಡರಗಿ ತಾಲೂಕಿನಾದ್ಯಂತ ಅಕ್ರಮ ಮದ್ಯ ಮಾರಾಟ ಅವ್ಯಾಹತವಾಗಿ ನಡೆದಿದ್ದು, ಇದನ್ನು ಅಬಕಾರಿ ಇಲಾಖೆ ತಡೆಯದಿದ್ದರೆ ಅಬಕಾರಿ ಇಲಾಖೆಯ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿ ಕಚೇರಿಯ ಮುಂದೆ ಹೋರಾಟ ಮಾಡಲಾಗುವುದು ಎಂದಿದ್ದಾರೆ.

# ವರದಕ್ಷಿಣೆ ಕಿರುಕುಳ: ಡೆತ್ ನೋಟ್ ಬರೆದಿಟ್ಟು ನೇಣಿಗೆ ಕೊರಳೊಡ್ಡಿದ ಗೃಹಿಣಿ!

■ವಿಜಯಸಾಕ್ಷಿ ಸುದ್ದಿ, ಕೋಲಾರ

ಪತಿ ಮನೆಯವರ ವರದಕ್ಷಿಣೆ ಕಿರುಕುಳ ತಾಳಲಾರದೇ ಮದುವೆಯಾದ ಒಂದೇ ವರ್ಷಕ್ಕೆ ಗೃಹಿಣಿ ನೇಣಿಗೆ ಶರಣಾಗಿರುವ ಘಟನೆ ಕೋಲಾರದ ಮಾಲೂರು ತಾಲೂಕಿನ ಕಾಡದೇನಹಳ್ಳಿಯಲ್ಲಿ ಜರುಗಿದೆ.

25 ವರ್ಷದ ರಶ್ಮಿ ಮೃತ ದುರ್ದೈವಿ. ಪತಿ ಮನೆಯಲ್ಲೇ ಡೆತ್‌ನೋಟ್ ಬರೆದಿಟ್ಟು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ದಿನೇಶ್ ಹಾಗೂ ರಶ್ಮಿ ಖಾಸಗಿ ಫೈನಾನ್ಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ವರ್ಷದ ಹಿಂದೆಯಷ್ಟೇ ಇಬ್ಬರೂ ಪ್ರೀತಿಸಿ ಮದುವೆಯಾಗಿದ್ದರು. ಆದರೆ ಇದೀಗ ಪತಿ ಮನೆಯವರ ಕಿರುಕುಳ ತಾಳಲಾರದೇ ಸೂಸೈಡ್ ಮಾಡಿಕೊಂಡಿದ್ದಾರೆ.



ಡೆತ್ ನೋಟ್ ನಲ್ಲಿ ಏನಿದೆ!?

'ರೀ ಸಾರಿ ನಿಮ್ಮ ಅಮ್ಮ, ದೊಡ್ಡಮ್ಮನ ಕಾಟ ತಡೆಯೋಕೆ ಆಗುತ್ತಿಲ್ಲ. ಮದುವೆಯಾಗಿ ಬಂದಾಗಿನಿಂದ ನೆಮ್ಮದಿಯೇ ಇಲ್ಲ. ನನ್ನಿಂದ ಸಹಿಸಿಕೊಳ್ಳೋಕೆ ಆಗುತ್ತಿಲ್ಲ. ನನ್ನ ಗಂಡ ಒಳ್ಳೆಯವನೇ, ಆದರೆ ಮನೆಯವರು ಒಳ್ಳೆಯವರಲ್ಲ. ಅದಕ್ಕೆ ನೀವು ಬರುವಷ್ಟರಲ್ಲೇ ಸಾಯುತ್ತಿದ್ದೇನೆ, ಬೈ' ಎಂದು ಬರೆದಿದ್ದಾರೆ.

ಇತ್ತ ತಂದೆ ತಾಯಿಗೂ ಕ್ಷಮೆ ಕೇಳಿರುವ ರಶ್ಮಿ, ಅಮ್ಮ ಇಷ್ಟು ದಿನ ಇಲ್ಲಿನ ಕಷ್ಟ ಸಹಿಸಿಕೊಂಡೆ. ಇಲ್ಲಿಯವರು ಒಳ್ಳೆಯವರಲ್ಲ. ವರದಕ್ಷಿಣೆ ತಂದಿಲ್ಲ ಎಂದು ಹೊಡೆಯುತ್ತಾರೆ ಎಂದು ಬರೆದು ಪತಿ ಕುಟುಂಬಸ್ಥರ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ ಎಂದಿದ್ದಾರೆ.

ಇನ್ನೂ 3 ತಿಂಗಳ ಹಿಂದೆ ರಶ್ಮಿಗೆ ಗರ್ಭಪಾತವಾಗಿದ್ದು, ವರದಕ್ಷಿಣೆ ನೀಡಿಲ್ಲ. ಮಗು ಆಗಿಲ್ಲ ಎಂದು ಮಾನಸಿಕ ಹಿಂಸೆ ನೀಡುತ್ತಿದ್ದರು ಎನ್ನಲಾಗಿದೆ. ಘಟನೆ ಸಂಬಂಧ ಮಾಲೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# ಬೀದಿ ನಾಯಿ ಹಾವಳಿ ನಿಯಂತ್ರಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಮತ್ತೆ ಬೀದಿನಾಯಿಗಳ ಹಾವಳಿ ಹೆಚ್ಚುತ್ತಿದ್ದು, ಅವುಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು, ಬೀದಿನಾಯಿಗಳ ಹಾವಳಿಯಿಂದ ಮಕ್ಕಳನ್ನು, ವೃದ್ಧರನ್ನು ರಕ್ಷಿಸುವಂತೆ ಆಗ್ರಹಿಸಿ ಸಾರ್ವಜನಿಕರು ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಮತ್ತು ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಶುಕ್ರವಾರ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪುರಸಭೆ ಮಾಜಿ ಸದಸ್ಯ ಅನಿಲ ಮುಳಗುಂದ ಮತ್ತು ಯಲ್ಲಪ್ಪ ಹಂಜಗಿ, ಹುಲಗೇರಿಬಣ, ವಾರ್ಡ್ ನಂ.20, ಪುರಸಭೆ ಹಿಂಭಾಗದಲ್ಲಿ ಸೇರಿದಂತೆ ಅನೇಕ ಕಡೆಗಳಲ್ಲಿ ಮತ್ತೆ ಬೀದಿ ನಾಯಿಗಳ ಹಾವಳಿ ಹೆಚ್ಚಾಗುತ್ತಿದೆ. ಚಿಕ್ಕ ಮಕ್ಕಳು ಮತ್ತು ವೃದ್ಧರ ಮೇಲೆ ಬೀದಿ ನಾಯಿಗಳು ದಾಳಿ ಮಾಡುತ್ತಿವೆ. ಕೂಡಲೇ ಪುರಸಭೆಯವರು ಕ್ರಮ ಕೈಗೊಂಡು ಬೀದಿ ನಾಯಿಗಳನ್ನು ಬೇರೆಡೆ ಸ್ಥಳಾಂತರಿಸಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಹಾಗೂ ಮುಖ್ಯಾಧಿಕಾರಿ ಮಹೇಶ ಹಡಪದ, ಬೀದಿ ನಾಯಿಗಳ ನಿಯಂತ್ರಣಕ್ಕೆ ಈ ಹಿಂದೆ ಕ್ರಮ ತೆಗೆದುಕೊಳ್ಳಲಾಗಿತ್ತು. ಆದರೆ ಇದೀಗ ಮತ್ತೆ ನಾಯಿಗಳ ಸಂಖ್ಯೆ ಹೆಚ್ಚಾಗಿರುವ ಹಾಗೂ ಜನರ ಮೇಲೆ ದಾಳಿ ನಡೆಸುತ್ತಿರುವ ದೂರುಗಳು ಬರುತ್ತಿದ್ದು, ಆಡಳಿತ ಮಂಡಳಿಯವರೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಟಾಕಪ್ಪ ಸಾತಪುತೆ, ಎನ್.ಎಚ್. ಶೆರಸೂರಿ, ಶಶಿಕುಮಾರ ಸಾತಪುತೆ, ಅಭಿಷೇಕ್ ಸಾತಪುತೆ, ಸಿದ್ದಪ್ಪ ಗದ್ದಿ, ದೇವಪ್ಪ ಸಾತಪುತೆ ಮುಂತಾದವರಿದ್ದರು.

### ಶಾಸ್ತ್ರೀಜಿ ಮಹಿಳಾ ಬಿಎಡ್ ಕಾಲೇಜಿನಲ್ಲಿ ಪೌರತ್ವ ತರಬೇತಿ ಶಿಬಿರ

# ನಮ್ಮ ಸಂವಿಧಾನ ನಮ್ಮ ಹೆಮ್ಮೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸಂವಿಧಾನವು ನಮ್ಮ ಹೆಮ್ಮೆಯಾಗಿದ್ದು, ಇದು ಭಾರತದ ಸರ್ವೋಚ್ಚ ಕಾನೂನು ಆಗಿದೆ. ಭಾರತೀಯ ಪೌರರಾದ ನಾವು ಸಂವಿಧಾನವನ್ನು ಅರಿತು ಗೌರವಿಸಬೇಕೆಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಶುಕ್ರವಾರ ಗದುಗಿನ ಶಾಸ್ತ್ರೀಜಿ ಮಹಿಳಾ ಬಿಎಡ್ ಕಾಲೇಜಿನಲ್ಲಿ ಪ್ರಶಿಕ್ಷಣಾರ್ಥಿಗಳಿಗಾಗಿ ಏರ್ಪಡಿಸಿದ್ದ ಪೌರತ್ವ ತರಬೇತಿ ಶಿಬಿರದಲ್ಲಿ 'ನಮ್ಮ ಸಂವಿಧಾನ ನಮ್ಮ ಹೆಮ್ಮೆ' ವಿಷಯವಾಗಿ ಉಪನ್ಯಾಸ ನೀಡಿದರು. ನಮ್ಮ ದೇಶವು ಸರ್ವ ಜನಾಂಗದ ಶಾಂತಿಯ ತೋಟವಾಗಿದೆ. ಸಮನ್ವಯತೆ, ಭ್ರಾತೃತ್ವ, ಭಾವೈಕ್ಯತೆ ಇಲ್ಲಿ ನೆಲೆ ನಿಂತಿದೆ. ಪ್ರತಿಯೊಬ್ಬರಿಗೂ ಹಕ್ಕು ಮತ್ತು ಕರ್ತವ್ಯಗಳಿದ್ದು, ಅವುಗಳನ್ನು ಸದ್ವಿನಿಯೋಗಗೊಳಿಸಬೇಕೆಂದರು.




ಜೆ.ಸಿ.ಎಸ್ ಎಜ್ಯುಕೇಶನ್ ಸೊಸೈಟಿಯ ಕಾರ್ಯದರ್ಶಿ ಮಹಾಂತ ಹಿರೇಮಠ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಭಾರತವು ಸುಖ, ಶಾಂತಿ, ಸಮೃದ್ಧಿಯ ಆಗರವಾಗಿದ್ದು, ಇಲ್ಲಿಯ ಪೌರರಾದ ನಾವು ಪುಣ್ಯವಂತರು. ಮುಖ್ಯವಾಗಿ ನಮ್ಮಲ್ಲಿ ದೇಶಾಭಿಮಾನ ಬೆಳೆದು ಬರಬೇಕು ಎಂದರು.

ಶಿಬಿರದ ಸಂಯೋಜಕರಾದ ಪ್ರೊ. ಎಂ.ಸಂದೀಪ ಮಾತನಾಡಿ, ಭವ್ಯ ಭಾರತಕ್ಕೆ ಬಹು ದೊಡ್ಡ ಇತಿಹಾಸವಿದ್ದು, ಪ್ರಜಾಪ್ರಭುತ್ವ ರಾಷ್ಟ್ರವಾದ ನಮ್ಮಲ್ಲಿ ಸಂಸ್ಕೃತಿ, ಮೌಲ್ಯಗಳು ನಮಗೆ ಸದಾ ದಾರಿ ತೋರುತ್ತವೆ ಎಂದರು.

ಪ್ರೊ. ನಿರ್ಮಲಾ ಮಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ದೇಶದ ಇತಿಹಾಸದ ಪುಟಗಳಲ್ಲಿ ಧರ್ಮ, ತ್ಯಾಗದ ಮನೋಭಾವನೆಗಳು ಮೂಡಿ ಬಂದಿವೆ. ಹಿರಿಯರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು ಎಂದರು.

ವೇದಿಕೆಯ ಮೇಲೆ ಶಾಲಾ ಆಡಳಿತ ಮಂಡಳಿಯ ಸದಸ್ಯರಾದ ಅಕ್ಷಯ ಹಿರೇಮಠ, ಕುಸುಮಾ ಹಿರೇಮಠ, ಪ್ರೊ. ಎಸ್.ಡಿ. ದೇಶಪಾಂಡೆ, ಪ್ರೊ. ರಾಜೇಸಾಬ ಕೆರೂರ, ಪ್ರೊ. ಗಂಗಪ್ಪ ಎಚ್ ಉಪಸ್ಥಿತರಿದ್ದರು.

ಸಂಜನಾ ಹಿರೇಮಠ, ಸುಷ್ಮಾ ಗಾಣಿಗೇರ ಪ್ರಾರ್ಥಿಸಿದರು. ಪೂಜಾ ಮದಗುಣಕಿ ಸ್ವಾಗತಿಸಿದರು. ಪ್ರೊ. ವನಜಾಕ್ಷೀ ಅರಳೇಲೇಮಠ ಪರಿಚಯಿಸಿದರು. ಮೇಘಾ ತಾಂಶಿ ನಿರೂಪಿಸಿದರು. ಶಕುಂತಲಾ ಗುಳೇದ ವಂದಿಸಿದರು.

> ಅಧ್ಯಕ್ಷತೆಯನ್ನು ಪ್ರಾಚಾರ್ಯರಾದ ಡಾ. ಶಿಲ್ಪಾ ಹೊನ್ನಗುಡಿ ವಹಿಸಿ ಮಾತನಾಡಿ, ವಿದ್ಯಾರ್ಥಿ ಹಂತದಲ್ಲಿ ಮಕ್ಕಳಿಗೆ ದೇಶಾಭಿಮಾನ ಮೂಡಿಸುವ ಕೆಲಸವಾಗಬೇಕು. ಪೌರತ್ವ ಶಿಬಿರವು ಇದಕ್ಕೆ ಪೂರಕವಾಗಿದೆ ಎಂದರು.

### 'ಸಂವಿಧಾನದ ಮೂಲಭೂತ ಕರ್ತವ್ಯ' ಕುರಿತು ಜಾಗೃತಿ ಕಾರ್ಯಕ್ರಮ

# ಸಂವಿಧಾನದ ಆಶಯಗಳ ಬಗ್ಗೆ ತಿಳಿಹೇಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನದ ಆಶಯಗಳನ್ನು ಅರಿಯಲು, ಭಾರತದ ಪ್ರಬುದ್ಧ ನಾಗರಿಕನಾಗಲು ಪ್ರತಿ ಮನೆಯಲ್ಲೂ ಸಂವಿಧಾನದ ಪುಸ್ತಕ ಇರಬೇಕೆಂದು ಪತ್ರಕರ್ತ, ನ್ಯಾಯವಾದಿ ಅನಂತ ಎಸ್.ಕಾರ್ಕಳ ಹೇಳಿದರು.

ರೋಟರಿ ಕ್ಲಬ್ ಗದಗ-ಬೆಟಗೇರಿ ಸಂಸ್ಥೆ ಆಯೋಜಿಸಿದ್ದ ಸಂವಿಧಾನದ ಮೂಲಭೂತ ಕರ್ತವ್ಯ ವಿಷಯದ ಮೇಲೆ ಉಪನ್ಯಾಸ ನೀಡಿ ಅವರು ಮಾತನಾಡುತ್ತಿದ್ದರು.




ಪ್ರತಿ ಮನೆಯಲ್ಲೂ ಸಂವಿಧಾನದ ಪುಸ್ತಕ ಮತ್ತು ಭಗವದ್ಗೀತೆ ಗ್ರಂಥ ಇರಬೇಕು. ನಮ್ಮ ಹಕ್ಕುಗಳ ಜೊತೆ-ಗೆ ದೇಶಕ್ಕಾಗಿ ಮಾಡಬೇಕಾದ ನಮ್ಮ ಕರ್ತವ್ಯಗಳನ್ನು ಅರಿಯದೆ ಇದ್ದರೆ ಸಂವಿಧಾನಕ್ಕೆ ಅಪಚಾರ ಮಾಡಿದಂತಾಗಲಿದೆ. ದೇಶ ನಮಗೇನು ಕೊಟ್ಟಿದೆ ಎನ್ನುವದಕ್ಕಿಂತ ದೇಶಕ್ಕೆ ನಾವು ಏನು ಕೊಟ್ಟಿದ್ದೇವೆ ಎಂಬುದು ಮುಖ್ಯವಾಗಿದೆ ಎಂದರು.

ಸಂಸಾರ, ಸಮಾಜ, ಸರಕಾರ ಸೇರಿ ಭಾರತದ ಪ್ರಜಾಪ್ರಭುತ್ವದ ದಿಕ್ಸೂಚಿಯಾಗಿರುವ ಸಂವಿಧಾನವನ್ನು ನಾವು ಅರಿಯದೆ ಹೋದರೆ ಭಾರತದ ಪ್ರಜೆಯಾಗಿರುವುದು ನಿಷ್ಪ್ರಯೋಜಕ. ನಮ್ಮ ಮನೆ, ಮಡದಿ, ಮಾತೆ, ಮಕ್ಕಳಿಗೆ ಸಂವಿಧಾನದ ಆಶಯಗಳ ಬಗೆಗೆ ತಿಳಿಹೇಳುವ ಜೊತೆಗೆ ದೇಶಕ್ಕಾಗಿ ನಾವು ಮಾಡಬೇಕಾದ ಕರ್ತವ್ಯಗಳನ್ನು ತಿಳಸಬೇಕೆಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಡಾ. ಆರ್.ಬಿ. ಉಪ್ಪಿನ ವಹಿಸಿ ಸರ್ವರನ್ನು ಸ್ವಾಗತಿಸಿದರು. ರೋಟರಿ ಸಂಸ್ಥೆಯ ವೆಲ್‌ಫೇರ್ ಸಮಿತಿ ಅಧ್ಯಕ್ಷರಾದ ಶ್ರೀಧರ್ ಸುಲ್ತಾನಪುರ ಕಾರ್ಯಕ್ರಮದ ಅತಿಥಿಗಳನ್ನು ಸಭೆಗೆ ಪರಿಚಯಿಸಿದರು. ಹಿರಿಯ ರೋಟರಿಯನ್ ಡಾ. ರಾಜಶೇಖರ ಬಳ್ಳಾರಿ, ಡಾ. ರಾಜೇಂದ್ರ ಗಚ್ಚಿನಮಠ, ಅಶೋಕ ಅಕ್ಕಿ, ಡಾ. ಪ್ರದೀಪ ಉಗಲಾಟ, ಸುರೇಶ ಕುಂಬಾರ, ಅಕ್ಷಯ ಶೆಟ್ಟಿ, ರೊ. ಕಾರ್ತಿಕ ಮುತ್ತಿನಪೆಂಡಿಮಠ, ರುದ್ರೇಶ ಬಳಿಗಾರ, ಡಾ. ವಿನಯ್ ಟಿಕಾರೆ ಮುಂತಾದವರು ಉಪಸ್ಥಿರಿದ್ದರು.

ಸಂಸ್ಥೆಯ ಪ್ರಭಾರಿ ಕಾರ್ಯದರ್ಶಿ ಶಿವಾಚಾರ್ಯ ಹೊಸಳ್ಳಿಮಠ ನಿರೂಪಿಸಿ, ವಂದಿಸಿದರು.

# ಮಾನನಷ್ಟ ಪ್ರಕರಣ: ಹೋರಾಟಗಾರ್ತಿ ಮೇಧಾ ಪಾಟ್ಕರ್ ಬಂಧನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿಯ ಹಾಲಿ ಲೆಫ್ಟಿನೆಂಟ್ ಗವರ್ನರ್ (ಎಲ್-ಜಿ) ವಿ.ಕೆ ಸಕ್ಸೇನಾ ಅವರು 24 ವರ್ಷಗಳ ಹಿಂದೆ ಹೂಡಿರುವ ಮಾನನಷ್ಟ ಮೊಕದ್ದಮೆ ಸಂಬಂಧ 'ನರ್ಮದಾ ಬಚಾವೋ ಆಂದೋಲನ'ದ ನಾಯಕಿ, ಹೋರಾಟಗಾರ್ತಿ ಮೇಧಾ ಪಾಟ್ಕರ್ ಅವರನ್ನು ಪೊಲೀಸರು ಶುಕ್ರವಾರ (ಏ.25) ಬಂಧಿಸಿದ್ದಾರೆ.

ಪ್ರಕರಣ ಸಂಬಂಧ ಪ್ರೊಬೇಷನ್ ಬಾಂಡ್‌ಗಳನ್ನು ಸಲ್ಲಿಸದ ಕಾರಣ ಮೇಧಾ ಪಾಟ್ಕರ್ ವಿರುದ್ಧ ದೆಹಲಿ ನ್ಯಾಯಾಲಯ ಬುಧವಾರ (ಏ.23) ಜಾಮೀನು ರಹಿತ ವಾರೆಂಟ್ ಹೊರಡಿಸಿತ್ತು.

2001ರಲ್ಲಿ ಪಾಟ್ಕರ್ ವಿರುದ್ಧ ಸಕ್ಸೇನಾ ಪ್ರಕರಣ ದಾಖಲಿಸಿದ್ದರು. ಆಗ ಅವರು ಅಹಮದಾಬಾದ್ ಮೂಲದ ಎನ್‌ಜಿಒ ನ್ಯಾಷನಲ್ ಕೌನ್ಸಿಲ್ ಫಾರ್ ಸಿವಿಲ್ ಲಿಬರ್ಟೀಸ್‌ನ ಮುಖ್ಯಸ್ಥರಾಗಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka